ಸಂಪುಟ : 10 ಸಂಚಿಕೆ: 279 ಪುಟ : 4+2 ಬೆಲೆ: 3.00 ಶನಿವಾರ ಡಿಸೆಂಬರ್ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 279 Pages : 4+2 Price : 3.00 Saturday December 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ವಿದ್ಯುತ್ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳು 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿದೆ.

ಇದರ ಪ್ರಯುಕ್ತ ಡಿ. 20ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು. ಮುಂಡರಗಿ ಉಪವಿಭಾಗದಲ್ಲಿ ಅಧೀಕ್ಷಕ ಇಂಜಿನಿಯರ(ವಿ), ಕಾರ್ಯ ಮತ್ತು ಪಾಲನೆ ವೃತ್ತ, ಹು.ವಿ.ಸ.ಕಂ.ನಿ ಗದಗ ಅವರ ಅಧ್ಯಕ್ಷತೆಯಲ್ಲಿ ವಿದ್ಯುತ್ ಅದಾಲತ್ತನ್ನು ನಡೆಸಲಾಗುವುದು. ಸಾರ್ವಜನಿಕರು ಪ್ರಕಟನೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಕೋರಲಾಗಿದೆ.

## ವಾಹನಗಳ ತಪಾಸಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿ ವಿಭಾಗದ ಜಂಟಿ ಸಾರಿಗೆ ಆಯುಕ್ತರಾದ ಸಿದ್ದಪ್ಪ ಎಚ್. ಕಲ್ಲೇರ ಅವರ ನಿರ್ದೇಶನದನ್ವಯ ವಿಶೇಷ ತಂಡವನ್ನು ರಚಿಸಿ ಗದಗ ಜಿಲ್ಲೆಯಲ್ಲಿರುವ ಶಾಲಾ ವಾಹನಗಳನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿ ವಿಶಾಲ ಜಿ.ಪಿ ಹಾಗೂ ಹಿರಿಯ ಮೋಟಾರು ವಾಹನ ನಿರೀಕ್ಷಕರುಗಳಾದ ಅರುಣ ಕಟ್ಟಿಮನಿ, ಬಾಲಚಂದ್ರ ತೊದಲಬಾಗಿ ಅವರ ನೇತೃತ್ವದಲ್ಲಿ ವಿಶೇಷ ತಪಾಸಣೆ ನಡೆಸಿ ಡಿ. 18ರಿಂದ 31 ವಾಹನಗಳನ್ನು ತಪಾಸಣೆ ನಡೆಸಲಾಯಿತು.

ರಹದಾರಿ ಉಲ್ಲಂಘನೆ ಮಾಡಿದ 7 ಶಾಲಾ ವಾಹನಗಳ ಮೇಲೆ ಪ್ರಕರಣ ದಾಖಲಿಸಲಾಗಿದೆ. ಇತರೆ ಶಾಲಾ ವಾಹನಗಳಿಗೆ ಸರಿಯಾದ ಸಮಯಕ್ಕೆ ದಾಖಲಾತಿಗಳನ್ನು ನವೀಕರಿಸಿಕೊಳ್ಳಲು ಹಾಗೂ ಮಕ್ಕಳ ಸುರಕ್ಷತೆ ಬಗ್ಗೆ ಗಮನಹರಿಸಲು ವಾಹನ ಚಾಲಕರಿಗೆ ಹಾಗೂ ಸಹ ಚಾಲಕರಿಗೆ ತಿಳುವಳಿಕೆ ನೀಡಲಾಯಿತು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## 'ವಿಶ್ವ ಧ್ಯಾನ ದಿನಾಚರಣೆ' ಇಂದು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ ಆವರಣದಲ್ಲಿ ಅವ್ವ ಪ್ರತಿಷ್ಠಾನ, ನೆಹರು ಯುವ ಕೇಂದ್ರ, ಪತಂಜಲಿ ಯೋಗ ಸಮಿತಿ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಡಿ. 20ರ ಬೆಳಿಗ್ಗೆ 2ನೇ ವಿಶ್ವ ಧ್ಯಾನ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಲಿದ್ದು, ಉದ್ಘಾಟಕರಾಗಿ ರುದ್ರಣ್ಣಾ ಗುಳಗುಳೆ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಎಸ್.ಸಿ. ಬಡ್ನಿ, ಕೇಶವ ದೇವಾಂಗ್, ಶಿವಪ್ರಕಾಶ ಮಾಹಾಜನಶೆಟ್ರ, ಡಾ. ಎಸ್.ಸಿ. ಚವಡಿ, ಮಂಜುನಾಥ ಮಾಗಡಿ, ಧಶರಥ ಕೊಟೆಗೌಡ್ರ, ಪರಶುರಾಮ ವಂಟಕರ, ನಾಗರಾಜ ಸುರಣಗಿ, ವಿ.ಎಸ್. ನೀಲಗುಂದ, ಡಿ.ಎಸ್. ನೀಲಗುಂದ, ಮಂಜುನಾಥ ಮಟ್ಟಿ, ಪುನೀತ ಓಲೆಕಾರ, ಅನೂಪ ಕೆಂಚನಗೌಡರ, ಬಸವರಾಜ ಹಾರೋಗೇರಿ, ಗಿರೀಶ ಹುಲ್ಲೂರ, ರಾಜು ರಸಾಳಕರ, ಮಾಲಕ್ಕ ದಂದರಗಿ, ಶೈಲಾ ಆದಿ, ಶಶಿಕಲಾ ವಡಕಣ್ಣವರ, ಗೀತಾ ಜಾಧಾವ, ಶಾಂತಾ ಬೆನಕನ್ನವರ, ಹರ್ಷಲತಾ ದೇಶಪಾಂಡೆ, ಮಂಗಳಾ ನೀಲಗುಂದ, ನಾಗವೇಣಿ ನಾಯ್ಕರ, ಅಕ್ಕಮ್ಮಾ ನೀಲಗುಂದ, ಬ್ರಹ್ಮಕುಮಾರಿ ಶಿವಾನಿ ಅಕ್ಕ, ಶೋಭಾ ಪಾಟೀಲ ಪಾಲ್ಗೊಳ್ಳುವರು ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಸಮತೋಲನ ನಿವಾರಣೆಗೆ ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಒತ್ತು: ಸಿ.ಎಂ ಸಿದ್ದರಾಮಯ್ಯ

# ಉತ್ತರ ಕರ್ನಾಟಕ ಅಭಿವೃದ್ಧಿಗೆ ಸರ್ಕಾರ ಬದ್ಧ



ಉತ್ತರ ಕರ್ನಾಟಕ ಮತ್ತು ದಕ್ಷಿಣ ಕರ್ನಾಟಕದ ನಡುವೆ ಇರುವ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ನಮ್ಮ ಸರ್ಕಾರ ಬದ್ಧವಿದ್ದು, ಉತ್ತರ ಕರ್ನಾಟಕದಲ್ಲಿ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡುವ ನಿಟ್ಟಿನಲ್ಲಿ ಅನುದಾನ ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ಗದಗ, ಧಾರವಾಡ, ಬೆಳಗಾವಿ, ಬಾಗಲಕೋಟೆ ಜಿಲ್ಲೆಗಳ ಜನರಿಗೆ ಕುಡಿಯುವ ನೀರು ಪೂರೈಕೆಗಾಗಿ ಮಹದಾಯಿ ಯೋಜನೆ ರೂಪಿಸಿದ್ದು, 2018ರಲ್ಲಿ ಸರ್ವೋಚ್ಚ ನ್ಯಾಯಾಲಯ ತೀರ್ಮಾನಿಸಿದಂತೆ 13.42 ಟಿ.ಎಂ.ಸಿ ನೀರು ಹಂಚಿಕೆ ಮಾಡಲಾಗಿದೆ. ಆದರೆ ಈವರೆಗೂ ಕೇಂದ್ರ ಸರ್ಕಾರದ ಪರಿಸರ ಇಲಾಖೆಯು ಕ್ಲಿಯರೆನ್ಸ್ ನೀಡದೆ ಅಸಹಕಾರ ತೋರುತ್ತಿದೆ. ನಾವು ಈ ಯೋಜನೆಗೆ ಡಿಪಿಆರ್ ಸಿದ್ಧಪಡಿಸಿಕೊಂಡು ಕಾಯುತ್ತಿದ್ದೇವೆ. ಹೀಗಾಗಿ ವಿಪಕ್ಷಗಳು ಕೂಡ ಕೇಂದ್ರ ಸರ್ಕಾರದ ಮನವೊಲಿಸಿ, ಯೋಜನೆಗೆ ಕ್ಲಿಯರೆನ್ಸ್ ಕೊಡುವ ಕಾರ್ಯದಲ್ಲಿ ಕೈಜೋಡಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತಂತೆ ಸರ್ಕಾರದ ಪರವಾಗಿ ವಿಧಾನಸಭೆಯಲ್ಲಿ ಶುಕ್ರವಾರ ಅವರು ಉತ್ತರ ನೀಡಿದರು.

ಕೃಷ್ಣ ಮೇಲ್ದಂಡೆ 3ನೇ ಹಂತದ ಯೋಜನೆಯಲ್ಲಿ ನಮಗೆ 173 ಟಿ.ಎಂ.ಸಿ. ನೀರು ಹಂಚಿಕೆಯಾಗಿದ್ದು, ಆಲಮಟ್ಟಿ ಜಲಾಶಯವನ್ನು 519 ಮೀನಿಂದ 524 ಮೀಗೆ ಹೆಚ್ಚಿಸಲು ಈಗಾಗಲೇ ಅನುಮತಿ ದೊ-ರೆತಿದೆ. ಇದುವರೆಗೂ ಕೇಂದ್ರ ಸರ್ಕಾರ ಗೆಜೆಟ್ ನೋಟಿಫಿಕೇಶನ್ ಹೊರಡಿಸಿಲ್ಲ. ಯೋಜನೆಗೆ 75 ಸಾವಿರ ಹೆ. ಭೂಮಿಯನ್ನು ಒಂದೇ ಹಂತದಲ್ಲಿ ಸ್ವಾಧೀನಪಡಿಸಿಕೊಂಡು, ತರಿ ಭೂಮಿಗೆ ಪ್ರತಿ ಹೆಕ್ಟೇರ್‌ಗೆ 40 ಲಕ್ಷ ರೂ., ಹಾಗೂ ಖುಷ್ಕಿ ಭೂಮಿಗೆ 30 ಲಕ್ಷ ರೂ. ಕೊಡಲು ನಾವು ಸಿದ್ಧರಿದ್ದು, ಈಗಾಗಲೇ ರೈತರೂ ಒಪ್ಪಿಕೊಂಡಿದ್ದಾರೆ. ಮುಂದಿನ ಬಜೆಟ್‌ನಲ್ಲಿ ಇದಕ್ಕೆ ಅನುದಾನ ಒದಗಿಸಲು ನಾವು ಸಿದ್ಧರಿದ್ದೇವೆ, ಕೊಟ್ಟ ಮಾತಿನಂತೆ ನಡೆದುಕೊಳ್ಳುವ ಸರ್ಕಾರ ನಮ್ಮದು ಎಂದರು.

ರಾಜ್ಯದಲ್ಲಿನ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಪರಿಹಾರ ಕಂಡುಕೊಳ್ಳಲು 2001ರಲ್ಲಿ ಆಗಿನ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರು ಆರ್ಥಿಕ ತಜ್ಞ ಪ್ರೊ. ನಂಜುಂಡಸ್ವಾಮಿ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ, ಅವರಿಂದ 2002ರಲ್ಲಿ ವರದಿ ಪಡೆಯಲಾಗಿತ್ತು. ನಂಜುಂಡಪ್ಪ ವರದಿಯಂತೆ ಅತ್ಯಂತ ಹಿಂದುಳಿದ 39 ತಾಲೂಕು, ಅತಿ ಹಿಂದುಳಿದ 40 ತಾಲೂಕು ಹಾಗೂ 35 ಹಿಂದುಳಿದ ತಾಲೂಕು ಸೇರಿದಂತೆ ಒಟ್ಟು 114 ತಾಲೂಕುಗಳನ್ನು ಹಿಂದುಳಿದ ತಾಲೂಕುಗಳೆಂದು ತಿಳಿಸಿದ್ದರು. ಈ ಪೈಕಿ 27 ತಾಲೂಕುಗಳು ಉತ್ತರ ಕರ್ನಾಟಕ ವ್ಯಾಪ್ತಿಯಲ್ಲಿವೆ. ಈ ತಾಲ್ಲೂಕುಗಳನ್ನು ಅಭಿವೃದ್ಧಿಪಡಿಸಲು 8 ವರ್ಷಗಳಲ್ಲಿ 31 ಸಾವಿರ ಕೋಟಿ ರೂ. ಒದಗಿಸಿ, ಅಸಮತೋಲನೆ ನಿವಾರಿಸಬೇಕು ಎಂದಿದ್ದರು.

ಆದರೆ 31 ಸಾವಿರ ಕೋಟಿ ರೂ.ಗಳಿಗಿಂತಲೂ ಹೆಚ್ಚಿನ ಹಣ ಹಿಂದುಳಿದ ತಾಲೂಕುಗಳಲ್ಲಿ ಖರ್ಚಾಗಿದೆ. ನಂಜುಂಡಪ್ಪ ಅವರ ವರದಿಯಂತೆ ಹಿಂದುಳಿದ ತಾಲೂಕುಗಳಿಗೆ ▸▸3ನೇ ಪುಟಕ್ಕೆ

### ಎಳ್ಳ ಅಮವಾಸ್ಯೆ: ಭೂತಾಯಿಗೆ ಚರಗ ಚೆಲ್ಲಿ ಸಾಮೂಹಿಕ ಭೋಜನದ ಸವಿಯುಂಡ ಅನ್ನದಾತ

# ಉತ್ತಮ ಫಸಲಿಗಾಗಿ ಭೂದೇವಿಗೆ ನಮನ



ಹೊಲಕ್ಕೆ ತೆರಳಿದ ಮಹಿಳೆಯರು ಅಡುಗೆ ಬಿಚ್ಚಿಟ್ಟು ಹೊಲದಲ್ಲಿರುವ ಐದು ಜೋಳದ ದಂಟು, ಚಿಕ್ಕ ಐದು (ಪಂಚ ಪಾಂಡವರು) ಕಲ್ಲುಗಳನ್ನು ಹುಡುಕಿ ತಂದು ಪೂಜಿಸಿ, ಭೂತಾಯಿಗೆ ಪ್ರಾರ್ಥಿಸಿ, ಉಡಿತುಂಬಿ, ನೈವೇದ್ಯ ಅರ್ಪಿಸಿದ ಬಳಿಕ ಹೊಲದ ತುಂಬೆಲ್ಲ ನೈವೇದ್ಯ ರೂಪದಲ್ಲಿರುವ ಮೃಷ್ಟಾನ್ನ ಎಡೆ ಚರಗ ಚೆಲ್ಲಿದರು. ಹೊಲಕ್ಕೆ ಹೋದ ಮನೆ ಮಂದಿ, ಬೀಗರು ಹಾಗೂ ಅಕ್ಕ-ಪಕ್ಕದ ಮನೆಯವರು, ಜಮೀನಿನ ಸಮೀಪ ಹಾದುಹೋಗುವ ಅಪರಿಚಿತರನ್ನೂ ಕರೆದು, ಒಟ್ಟಿಗೆ ಕುಳಿತು ಭೋಜನ ಸವಿದು ಸಂಭ್ರಮಿಸಿದರು.




■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ಭಾಗದ ರೈತರು ಹೊಲಗಳಲ್ಲಿ ಹಚ್ಚ ಹಸಿರಿನ ಬೆಳೆಗಳ ಮಧ್ಯೆ ಭೂಮಿ ತಾಯಿಯ ಪೂಜೆ ಮಾಡಿ, ಉಡಿ ತುಂಬಿ ಪ್ರಾರ್ಥಿಸಿ, ಚರಗ ಸಮರ್ಪಿಸುವ ಹಾಗೂ ಸಾಮೂಹಿಕ ಭೋಜನ ಸವಿಯುವ ಪರಂಪರೆಯ ಪ್ರತೀಕದ ಎಳ್ಳ ಅಮವಾಸ್ಯೆ ಹಬ್ಬ ರೈತರಿಗೆ ಸಂಭ್ರಮದ ದಿನ.

ಹಿಂಗಾರು ಹಂಗಾಮಿನ ಬಿಳಿಜೋಳ ಮುಂತಾದ ಬೆಳೆಗಳು ಹುಲುಸಾಗಿ ಬೆಳೆಯಲಿ ಮತ್ತು ಎಳ್ಳಿನಷ್ಟಾದರೂ ಭಕ್ತಿ ಭೂರಮೆಯ ಮೇಲಿರಲಿ ಎಂದು ಪ್ರಾರ್ಥಿಸುವ ಹಬ್ಬವೇ ಎಳ್ಳ ಅಮವಾಸ್ಯೆ. ಚಳಿಯ ಏರಿಳಿತದ ಅವಧಿಯಲ್ಲಿ ಆಚರಿಸುವ ಈ ಹಬ್ಬಕ್ಕೆ ಎಳ್ಳ ಅಮವಾಸ್ಯೆ ಹೆಸರು ಬಂದಿರಬಹುದು ಎಂಬುದು ಹಿರಿಯರ ಅಭಿಪ್ರಾಯ. ಹಬ್ಬದ ಸಂದರ್ಭದಲ್ಲಿ ಬಿಳಿಜೋಳ ಮತ್ತು ಗೋಧಿತೆನೆಗಳು ಹೊರಬರುವ ತವಕದಲ್ಲಿರುವುದು ಸಮೃದ್ಧ ಬೆಳೆಯ ಸಂಕೇತ. ರೈತರು ಸೀಮಂತ ಮಾದರಿಯಲ್ಲಿ ಹೊಲದ ಕೊಂಪಿಯಲ್ಲಿ ಲಕ್ಷ್ಮೀದೇವಿಯನ್ನು ಪ್ರತಿಷ್ಠಾಪಿಸಿ ಪೂಜಿಸಿದರು. ಪಾಂಡವರಿಗೆ ಮತ್ತು ಲಕ್ಷ್ಮೀದೇವಿಗೆ ನೈವೇದ್ಯ ಅರ್ಪಿಸಿ ಬೆಳೆಗೆ ಯಾವುದೇ ರೋಗ ಬಾಧೆಯಾಗದಿರಲಿ ಹಾಗೂ ಉತ್ತಮ ಫಸಲು ಬರಲೆಂದು ಪ್ರಾರ್ಥಿಸಿದರು. ಹಬ್ಬದಂದು ಚರಗ ಚೆಲ್ಲುವ ಸಂಪ್ರದಾಯ ಪ್ರಾಚೀನ ಕಾಲದಿಂದ ಬಂದಿದೆ. ಇದರ ಬಳಿಕ ಎಲ್ಲರ ಸಾಮೂಹಿಕ ಭೋಜನ. ಈ ಭಾಗದ ಎಲ್ಲರ ಮನೆಯಲ್ಲಿ ಎಳ್ಳು ಅಮವಾಸ್ಯೆಯ ದಿನದಂದು ಮಾಡುವ ವಿಶೇಷ ಖಾದ್ಯಗಳಿಗೆ ಸಾಟಿಯಿಲ್ಲ. ಬೆಳಗ್ಗೆ ತಮ್ಮ ಮನೆಗಳಲ್ಲಿ ವಿವಿಧ ಖಾದ್ಯಗಳ ಅಡುಗೆ ತಯಾರಿಸಿ, ಹೊಲಕ್ಕೆ ತೆರಳಿ ಹಸಿರು ಸೀರೆಯನ್ನುಟ್ಟ ಭೂತಾಯಿಗೆ ಉಡಿ ತುಂಬಿ, ಪೂಜಿಸಿ, ಎಲ್ಲರೂ ಒಂದೆಡೆ ಕುಳಿತು ಮೃಷ್ಟಾನ್ನ ಭೋಜನ ಸವಿದರು.

## ಭೂತಾಯಿಗೆ ನಮಿಸಿ ಪುನೀತರಾದ ರೈತರು



■ ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಮುಗಳಿ ಗ್ರಾಮದಲ್ಲಿ ರೈತ ರಾಮಪ್ಪ ರಂಗಪ್ಪ ಕಾಶಪ್ಪನವರ ಇವರ ಹೊಲದಲ್ಲಿ ಸಂಭ್ರಮದಿಂದ ಎಳ್ಳು ಅಮಾವಾಸ್ಯೆಯನ್ನು ಭೂ ತಾಯಿಗೆ ಚರಗ ಚೆಲ್ಲುವ ಮೂಲಕ ಆಚರಿಸಲಾಯಿತು. ವರ್ಷಾನುಗಟ್ಟಲೇ ದುಡಿದ ದೇಹಗಳು ಸಂಭ್ರಮಿಸುವ ದಿನ. ಅನ್ನ ನೀಡುವ ಭೂ ತಾಯಿಗೆ ಸೀಮಂತ ಮಾಡಿ ಉಣಬಡಿಸುವ ಸಂತಸದ ದಿನ. ಗದಗ ಜಿಲ್ಲೆಯಾದ್ಯಂತ ಎಲ್ಲ ರೈತರು ಈ ದಿನವನ್ನು ಶುಕ್ರವಾರ ಸಂಭ್ರಮದಿಂದ ಆಚರಿಸಿದರು.

ರೈತರು ಎತ್ತುಗಳನ್ನು ಅಲಂಕರಿಸಿ, ಚಕ್ಕಡಿ ಹೂಡಿಕೊಂಡು ಸಾಲು ಸಾಲಾಗಿ ಹೊರಟ್ಟಿದ್ದ ಬಗೆ ಕಣ್ಣಿಗೆ ಹಬ್ಬವನ್ನುಂಟುಮಾಡುವಂತಿತ್ತು. ಮನೆಯ ಸಂಬಂಧಿಕರೆಲ್ಲಾ ಬಗೆ ಬಗೆಯ ಅಡುಗೆ ಮಾಡಿಕೊಂಡು ತಮ್ಮ ತಮ್ಮ ಹೊಲಗಳಿಗೆ ತೆರಳಿ ಬನ್ನಿ ಮರಕ್ಕೆ ಸೀರೆ ತೊಡಿಸಿ, ಉಡಿತುಂಬಿ, ಕೈಗೆ ಕಂಕಣ ಕಟ್ಟಿ, ಐದು ಕಲ್ಲುಗಳನಿಟ್ಟು ಪಂಚ ಪಾಂಡವರೆಂದು ಪೂಜಿಸಿದರು. ನೈವೇದ್ಯದ ಮೂಲಕ ಪೂಜೆ ಮಾಡಿ ಹುಲ್ಲಲಿಗೂ... ಚಳಾಂಬ್ರಿಗೋ ಅಂತ ಸಿಹಿ ತಿನಿಸುಗಳನ್ನು ಸುತ್ತ ಎರಚಿ ಮಳೆ-ಬೆಳೆ ಚೆನ್ನಾಗಿ ಆಗಲೆಂದು ಭಕ್ತಿಯಿಂದ ಬೇಡಿಕೊಂಡರು.

ಮುಂಗಾರು ಫಸಲು ಬಂದಾಗ ಮಳೆ ಅಬ್ಬರವಿರುತ್ತೆ ಭೂ ತಾಯಿಯನ್ನು ಪೂಜೆ ಮಾಡಲಾಗುವುದಿಲ್ಲ. ಹಾಗಾಗಿ ಹಿಂಗಾರು ಸಂದರ್ಭದಲ್ಲಿ ಎಳ್ಳು ಅಮಾವಾಸ್ಯೆ ವೇಳೆ ಭೂತಾಯಿಗೆ ಸೀಮಂತ ಮಾಡಲಾಗುತ್ತದೆ. ದೂರದ ಊರಿನ ಸಂಬಂಧಿಕರನ್ನು ಹಬ್ಬಕ್ಕೆ ಕರೆದು, ಎಲ್ಲರೂ ಒಟ್ಟಿಗೆ ಪೂಜೆಮಾಡಿ ಒಟ್ಟಿಗೆ ಊಟ ಮಾಡಿ ಸಂಭ್ರಮಿಸಿದರು.

ವರ್ಷಾನುಗಟ್ಟಲೇ ಸಮಸ್ಯೆಗಳ ಸರಮಾಲೆಯಲ್ಲಿ ಬಳಲಿದ ರೈತ ಈ ದಿನದಂದು ಆ ನೋವನ್ನೆಲ್ಲ ಮರೆತು ಸಂತಸದ ಕ್ಷಣಗಳನ್ನು ಅನುಭವಿಸಿದರು. ರೈತರನ್ನು ಸದಾ ಕಾಪಾಡುವ ಭೂತಾಯಿಗೆ ನಮಿಸಿ ಪುನೀತರಾದರು.



### ನೀರಾವರಿಗೆ ಅಕ್ರಮ ನೀರು ಬಳಕೆ; ತನಿಖೆ ನಡೆಸಲು ತಂಡ ರಚನೆ: ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

# ನ್ಯಾಯಾಧಿಕರಣವು ರಾಜ್ಯದ ಬೇಡಿಕೆಯನ್ನು ಪರಿಗಣಿಸಿಲ್ಲ



ಕಳೆದ ವರ್ಷದ ಬೇಸಿಗೆಯಲ್ಲಿ ಭೀಮಾ ನದಿ ನೀರು ಸಂಪೂರ್ಣ ಬತ್ತಿಹೋಗಿದ್ದರಿಂದ, ಕಲಬುರಗಿ, ವಿಜಯಪುರ, ಯಾದಗಿರಿ ಜಿಲ್ಲೆಯ ಜನರ ಕುಡಿಯುವ ನೀರು, ರೈತರ ಬೆಳೆಗಳಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಾಗಿತ್ತು. ಪ್ರತಿ ವರ್ಷ ಭೀಮಾ ತೀರದ ಜನರು ಒಟ್ಟಾಗಿ ಅಮರಣಾಂತರ ಉಪವಾಸ ಸತ್ಯಾಗ್ರಹ ಮಾಡಿ ಕುಡಿಯಲು ಬೇಕಾಗುವ ನೀರನ್ನು ಬಿಡಿಸಿಕೊಳ್ಳುತ್ತಿದ್ದಾರೆ.

ಕನಿಷ್ಠ ಕುಡಿಯುವ ನೀರಿಗೂ ಸಂಕಷ್ಟಕ್ಕೆ ಸಿಲುಕುತ್ತಿರುವ ಕಲಬುರಗಿ, ವಿಜಯಪುರ, ಯಾದಗಿರಿ ಜಿಲ್ಲೆಯ ಜನರಿಗೆ 15 ಟಿಎಂಸಿ ನೀರನ್ನು ಸಮರ್ಪಕವಾಗಿ ಬಳಕೆಯಾಗಲು ಹಾಗೂ ಮಹಾರಾಷ್ಟ್ರದ ಅಕ್ರಮ ನೀರಾವರಿ ಯೋಜನೆಗಳ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವ ಕುರಿತು ಡಾ. ತಳವಾರ್ ಸಾಬಣ್ಣ ಅವರು ಕೋರಿದ್ದರು.

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ, ಸುವರ್ಣಸೌಧ

ಮಹಾರಾಷ್ಟ್ರ ರಾಜ್ಯವು ನೀರಾವರಿ ಯೋಜನೆಗಳಿಗೆ ಅಕ್ರಮವಾಗಿ ನೀರು ಬಳಕೆ ಮಾಡುತ್ತಿರುವುದಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ರಾಜ್ಯದ ಅಧಿಕಾರಿಗಳ ಪ್ರತ್ಯೇಕ ತಂಡ ರಚನೆ ಮಾಡಿ, ವರದಿ ಪಡೆಯಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಅವರು ವಿಧಾನ ಪರಿಷತ್‌ನಲ್ಲಿ ಶಾಸಕ ಡಾ. ತಳವಾರ್ ಸಾಬಣ್ಣ ಅವರ ನಿಯಮ 33ರ ಸೂಚನೆಗೆ ಉತ್ತರಿಸಿ ಮಾತನಾಡಿದರು. ಕೃಷ್ಣ ಜಲವಿವಾದ ನ್ಯಾಯಾಧಿಕರಣ-1 (ಬಚಾವತ್ ನ್ಯಾಯಾಧಿಕರಣ) 1976ರಲ್ಲಿ ಅಂತಿಮ ತೀರ್ಪಿನ Clause-IX(A) (ii)(b) ಪ್ರಕಾರ ಮಹಾರಾಷ್ಟ್ರ ರಾಜ್ಯವು ಭೀಮಾ ನದಿಯಿಂದ 95 ಟಿಎಂಸಿಗಿಂತ ಹೆಚ್ಚಾಗಿ ನೀರನ್ನು ಬಳಸಬಾರದೆಂದು ಹಾಗೂ 3) (iii) ಪ್ರಕಾರ ಕರ್ನಾಟಕ ರಾಜ್ಯವು ಭೀಮಾ ಮುಖ್ಯ ನದಿಯಿಂದ 15 ಟಿಎಂಸಿಗಿಂತ ಹೆಚ್ಚು ಬಳಸಬಾರದೆಂದು ನಿರ್ಬಂಧವಿದೆ. ಸದರಿ ಅಂತಿಮ ತೀರ್ಪಿನಲ್ಲಿ ಕಣಿವೆ ಮಾಡಿರುವ ಒಟ್ಟಾರೆ ಹಂಚಿಕೆಯಲ್ಲಿ ಯಾವುದೇ ರಾಜ್ಯವು ಇನ್ನೊಂದು ರಾಜ್ಯಕ್ಕೆ ಬಿಡುಗಡೆ ಮಾಡುವ ಕುರಿತು ಆದೇಶವಿಲ್ಲ ಎಂದರು.

ಕರ್ನಾಟಕ ರಾಜ್ಯವು ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-2ರ ಮುಂದೆ ಭೀಮಾ ನದಿ ಉಪ ಕೊಳ್ಳದಲ್ಲಿನ ಬಳಕೆಗಾಗಿ 12 ಟಿ.ಎಂ.ಸಿ ಹೆಚ್ಚುವರಿ ನೀರಿನ ಬೇಡಿಕೆಯನ್ನು ಮಂಡಿಸಿತ್ತು. ಆದ-ರೆ ನ್ಯಾಯಾಧಿಕರಣವು ರಾಜ್ಯದ ಬೇಡಿಕೆಯನ್ನು ಪರಿಗಣಿಸಿಲ್ಲ. ಸದರಿ ಕೃಷ್ಣಾ ಜಲವಿವಾದ ನ್ಯಾಯಾಧಿಕರಣ-2ರ ಆದೇಶವು ಗೆಜೆಟ್ ಪ್ರಕಟಣೆ ಆಗಬೇಕಾಗಿದೆ ಎಂದು ತಿಳಿಸಿದರು.

## ಕವನ

# ನನ್ನವ್ವಾ

ಗುಬ್ಬಿಗೂಡ ನಂಗೆಲ್ಲಾ
ಈ ಗೂಡ ಬಿಟ್ರ ಬ್ಯಾರೆ ನಂಗ ದಿಕ್ಕಿಲ್ಲಾ
ನನ್ನ ಹೆತ್ತಾಕಿ ಯಾ ದೇವರಗಿಂತ ಏನ್ ಕಮ್ಮಿ ಇಲ್ಲಾ..!

ಅಪ್ಪನ ತೋಡಿಮ್ಯಾಗ ಕುಂತ ಬಾಳ ದಿನ ಆಡಿಲ್ಲಾ
ಕೈ ಹಿಡಕೊಂಡ ಹಿಂತಾದ ಬೇಕ ಅಪ್ಪಾ ಅಂತ ಕೇಳಿಲ್ಲಾ,
ತಂದಿ ಇಲ್ಲ ಅನ್ನು ಕೊರಗ ಏನ ಅನ್ನುದ ನಮ್ಮವ್ವಾ ನಂಗ್
ಇನ್ನು ತನಾ ತೋರಿಸಿ ಕೊಟ್ಟಿಲ್ಲಾ...!

ರಾಣಿ ಹಂಗ್ ನಾ ಏನ ಬೆಳದಿಲ್ಲಾ
ರೊಕ್ಕದ ಬೆಲೆ ಏನ್ ಅನ್ನುದ ನಂಗ್ ತಿಳದಿಲ್ಲಾ
ಬಡತನ ಏನ್ ಅನ್ನುದ ನಾ ಇಲ್ಲಿ ತನಕಾ ಕಂಡಿಲ್ಲಾ
ಇದಕ್ಕ ಹೇಳುದ ರೀ ನನ್ನ ಹೆತ್ತಾಕಿ ಯಾವ ದೇವರಗಿಂತ
ಏನ್ ಕಮ್ಮಿ ಇಲ್ಲಾ...!

ಮಗಳ ವಕೀಲ ಆಗ್ಯಾಳ ಅಂತ ಮಂದಿ ಮುಂದ
ಹೇಳುವಾಗ ಅಕಿ ಖುಷಿ ನೋಡಾಕ ನನ್ನ ಎರಡು ಕಣ್ಣು
ಸಲಾಂಗಿಲ್ಲಾ
ತನ್ನ ಮೂರು ಮಕ್ಕಳಾ ದಂಡಿಗಿ ಹಚ್ಚಾಕ ನಮ್ಮವ್ವ ಪಟ್ಟ ಕಷ್ಟ
ಅಷ್ಟ -ಇಷ್ಟ ಅಲ್ಲಾ
ಗುಡ್ಯಾಗಿನ ದೇವ್ರ ಎದ್ದ ಬಂದ್ರು ನನ್ನ ಹೆತ್ತಾಕಿ ಮುಂದ
ಸಾಟಿ ಇಲ್ಲಾ...!

ಬರಿಯುದ ಬಾಳ ಐತ್ರಿ ನನ್ನ ಹಡದಾಕಿ ಬಗ್ಗೆ ಕರೆ ಪದಗಳು
ಸಿಗಾಕುಂತಿಲ್ಲಾ
ಎದಿ ಮುಟಗೊಂಡ ಹೇಳತೇನ್ರೀ
ನನ್ನ ತಾಯಿಗಿಂತ ದೊಡ್ಡ ದೇವ್ರ
ಮತ್ತೊಂದಿಲ್ಲಾ...!



- **P g ಗೊರವನಕೊಳ್ಳ ( ವಕೀಲರು)**

## ನೋಯ್ಡಾ ಪೊಲೀಸ್ ಠಾಣೆಯೊಳಗೆ ವಕೀಲೆ ಮೇಲೆ ಲೈಂಗಿಕ ದೌರ್ಜನ್ಯ ಆರೋಪ

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಮಹಿಳಾ ವಕೀಲೆಯೊಬ್ಬರನ್ನು 14 ಗಂಟೆಗಳ ಕಾಲ ಅಕ್ರಮವಾಗಿ ಬಂಧಿಸಿ ಪೊಲೀಸರು ಲೈಂಗಿಕ ದೌರ್ಜನ್ಯ ಎಸಗಿ, ಕಸ್ಟಡಿಯಲ್ಲಿ ಚಿತ್ರಹಿಂಸೆ ನೀಡಿದ ಆರೋಪದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್, ಮುಚ್ಚಿದ ಕವರ್‌ನಲ್ಲಿ ಸಿಸಿಟಿವಿ ದೃಶ್ಯಾವಳಿಗಳನ್ನು ನೀಡಬೇಕು ಎಂದು ನೋಯ್ಡಾ ಸೆಕ್ಟರ್ 126 ಪೊಲೀಸ್ ಠಾಣೆಗೆ ಸೂಚಿಸಿದೆ.

ನೋಯ್ಡಾ ಪೊಲೀಸರಿಗೆ ಸುಪ್ರೀಂ ಕೋರ್ಟ್ ನೋಟಿಸ್ ಜಾರಿ ಮಾಡಿದ್ದು, ಇದು ಸಿಸಿಟಿವಿ ದೃಶ್ಯಾವಳಿಗಳನ್ನು ನಿರ್ಬಂಧಿಸಿದ ಪ್ರಕರಣವಾಗಿದೆ ಎಂದು ಹೇಳಿದೆ.

**ಬಳಗಾನೂರಿನಲ್ಲಿ ಇಂದು ನಡೆಯುವ ಗದಗ ಜಿಲ್ಲಾ ಪ್ರಥಮ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಪ್ರಯುಕ್ತ ಲೇಖನ**

# ಬಾಲ ಪ್ರತಿಭೆಗಳಿಗೆ ಶರಣ ಸಿರಿಯ ಸಂಭ್ರಮ

ಸಮಾನತೆಯ ಬೆಳಕಿನಲ್ಲಿ ಸದೃಢ, ಸುಂದರ, ವ್ಯಕ್ತಿ, ವ್ಯಕ್ತಿತ್ವ, ಸಮಾಜ ನಿರ್ಮಾಣದಲ್ಲಿ ಮಹತ್ವದ ಕೊಡುಗೆ ನೀಡಿದ ಸಾಹಿತ್ಯವೆಂದರೆ ಅದು ವಚನ ಸಾಹಿತ್ಯ. ಬಸವಾದಿ ಶಿವಶರಣರ ಎಲ್ಲ ವಿಚಾರಧಾರೆಗಳು ಮನುಕುಲದ ಉನ್ನತಿಗೆ ಬೆಳಕಾಗಿವೆ. ಸುಜ್ಞಾನದ ಕಡೆಗೆ ನಮ್ಮನ್ನು ಕೊಂಡೊಯ್ಯುವ ಶರಣರ ವಿಚಾರಗಳೆಲ್ಲವೂ ಸರ್ವಕಾಲಕ್ಕೂ ಅತ್ಯವಶ್ಯಕವಾಗಿ ಬೇಕಾಗಿರುವ ಮೌಲ್ಯಗಳಾಗಿವೆ. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ನಾಡಿನಾದ್ಯಂತ ಶರಣರ ವಿಚಾರಧಾರೆಗಳನ್ನು ಬಿತ್ತರಿಸುವ ಕಾರ್ಯ ಮಾಡುತ್ತಿದೆ. ಶರಣ ಸಾಹಿತ್ಯ ಪರಿಷತ್ತಿನ ಅಶೋತ್ತರಗಳಂತೆ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಮತ್ತು ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಸಹಯೋಗದಲ್ಲಿ ಗದಗ ಜಿಲ್ಲಾ ಪ್ರಥಮ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನವನ್ನು ಆಯೋಜನೆ ಮಾಡಿದ್ದು ಹಲವು ವೈಶಿಷ್ಟ್ಯತೆಗಳ ಸಮಾಗಮವಾಗಿದೆ.

ಪರಿಷತ್ತಿನ ಗೌರವಾಧ್ಯಕ್ಷರಾಗಿರುವ ಪರಮಪೂಜ್ಯ ಸುತ್ತೂರಿನ ಶ್ರೀಗಳು ಹಾಗೂ ಗದುಗಿನ ತೋಂಟ-ದಾರ್ಯ ಮಠದ ಪರಮಪೂಜ್ಯ ಡಾ. ಸಿದ್ದರಾಮ ಮಹಾಸ್ವಾಮಿಗಳ ಆಶೀರ್ವಾದದೊಂದಿಗೆ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಿವೃತ್ತ ಐಎಎಸ್ ಅಧಿಕಾರಿಗಳಾದ ಡಾ. ಸಿ. ಸೋಮಶೇಖರ್ ಅವರ ಮಾರ್ಗದರ್ಶನದಲ್ಲಿ ಹಾಗೂ ಕದಳಿ ಮಹಿಳಾ ವೇದಿಕೆಯ ರಾಜ್ಯ ಸಂಚಾಲಕರಾದ ಸುಶೀಲಾ ಸೋಮಶೇಖರ್ ಅವರ ಸಹಕಾರದೊಂದಿಗೆ ಗದಗ ಜಿಲ್ಲೆಯಲ್ಲಿ ಇಂತಹ ವಿನೂತನವಾದ ಕಾರ್ಯಕ್ರಮ ನೆರವೇರುತ್ತಿದೆ.

ಮೌನ ತಪಸ್ವಿಗಳ ಸುಕ್ಷೇತ್ರ ಚಿಕ್ಕೇನಕೊಪ್ಪದ ಶ್ರೀ ಚನ್ನವೀರ ಶರಣರ ಮಠ ಬಳಗಾನೂರಿನಲ್ಲಿ ಪೂಜ್ಯ ಶ್ರೀ ಶಿವಶಾಂತವೀರ ಶರಣರ ಆಶೀರ್ವಾದ ಮಾರ್ಗದರ್ಶನ, ಸಲಹೆ-ಸೂಚನೆಗಳಂತೆ ಈ ಕಾರ್ಯಕ್ರಮ ಅವರ ಸೃಜನಾತ್ಮಕ ಚಿಂತನೆಯ ಪ್ರತಿಫಲವಾಗಿ ಆಯೋಜನೆಯಾಗಿದೆ. ಶ್ರೀ ದೊರೆಸ್ವಾಮಿ ಮಠ ಬೈರನಹಟ್ಟಿಯ ಪರಮಪೂಜ್ಯ ಶ್ರೀ ಮ.ನಿ.ಪ್ರ. ಶಾಂತಲಿಂಗ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಹಾಗೂ ಬೂದೀಶ್ವರ ಸಂಸ್ಥಾನಮಠದ ಶ್ರೀ ಮ.ನಿ.ಪ್ರ ಜಗದ್ಗುರು ಅಭಿನವ ಬೂದೀಶ್ವರ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಮಕ್ಕಳಿಗಾಗಿ ನಡೆಯುವ ಈ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಪ್ರಣತಿ ರಾಜೇಂದ್ರ ಗಡಾದ ಅವರು ಅಪರೂಪದ ಪ್ರತಿಭಾವಂತರು. ಸಾಹಿತಿಗಳಾದ ಡಾ. ರಾಜೇಂದ್ರ ಗಡಾದವರ ಸುಪುತ್ರಿ ಪ್ರಣತಿ ಗಡಾದ ಅವರ ತಂದೆ-ತಾಯಿಗಳಂತೆ ಸಾಹಿತ್ಯ ಆಸಕ್ತಿಯನ್ನು ಹೊಂದಿದವರು. ಕಥೆ ಕವನ ಚುಟುಕು ಹೀಗೆ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಚಿಕ್ಕ ವಯಸ್ಸಿನಲ್ಲಿಯೇ ಬರವಣಿಗೆಯ ಹವ್ಯಾಸವನ್ನು ಹೊಂದಿರುವ ಕ್ರಿಯಾಶೀಲ ಬರಹಗಾರ್ತಿ.



ಬೆಳೆಯುವ ಸಿರಿ ಮೊಳಕೆಯಲ್ಲಿ ಕಾಣು ಎಂಬಂತೆ ಬಾಲ ಪ್ರತಿಭೆಗಳನ್ನು ಗುರುತಿಸಿ ಈ ಸಮ್ಮೇಳನದಲ್ಲಿ 'ಬಾಲ ಶರಣ ಶ್ರೀ' ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಜಿಲ್ಲೆಯ 7ತಾಲೂಕುಗಳು ಹಾಗೂ ಒಂದು ಗ್ರಾಮೀಣ ಘಟಕವನ್ನು ಒಳಗೊಂಡು ಎಂಟು ಮಕ್ಕಳನ್ನು ಆಯ್ಕೆ ಮಾಡಿ ಅವರ ವಿಶೇಷ ಸಾಮರ್ಥ್ಯಕ್ಕೆ ಎಲ್ಲ ಶರಣ ಬಂಧುಗಳ, ಪರಮಪೂಜ್ಯರ ಸಮ್ಮುಖದಲ್ಲಿ ಸತ್ಕರಿಸುತ್ತಿರುವುದು ಅಭಿಮಾನದ ಸಂಗತಿಯಾಗಿದೆ.

ಗದಗ ಶಹರ ಘಟಕದಿಂದ ಡಾ. ವೈದೃತಿ ನಾ.ಕೊರಿಶೆಟ್ಟರ್ ಆಯ್ಕೆಯಾಗಿದ್ದು, ಅಸಾಧಾರಣ ನೆನಪಿನ ಶಕ್ತಿಯನ್ನು ಹೊಂದಿದ ಈ ಪುಟಾಣಿ ತನ್ನ 7ನೇ ವರ್ಷದಲ್ಲಿ 5 ಸಾವಿರ ಪ್ರಶ್ನೆಗಳಿಗೆ ಉತ್ತರಿಸಿದ್ದು, ಚೆನ್ನೈನ ದಿ ಯುನಿವರ್ಸಲ್ ವಿಶ್ವವಿದ್ಯಾಲಯದವರು ಇವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿಯನ್ನು ನೀಡಿದ್ದಾರೆ. ಇಂಡಿಯಾ ಬುಕ್ ಆಫ್ ರೆಕಾರ್ಡ್, ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್, ಕಲಾಂ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ದಾಖಲೆ ಮಾಡಿದ್ದಾರೆ.

ಶಿರಹಟ್ಟಿ ತಾಲೂಕಿನಿಂದ ಆಯ್ಕೆಯಾದ ಪುನೀತ್ ರೆಡ್ಡಿ ಎನ್.ಎ 9ನೇ ತರಗತಿಯಲ್ಲಿ ಓದುತ್ತಿರುವ, ಬಹುಮುಖ ಪ್ರತಿಭೆಯನ್ನು ಹೊಂದಿದ್ದಾನೆ. ದೊಡ್ಡಬಳ್ಳಾಪುರದಲ್ಲಿ 2025ರ ಅಕ್ಟೋಬರ್ 1ರಿಂದ 9ರವರೆಗೆ ನಡೆದ ರಾಜ್ಯಮಟ್ಟದ ಪ್ರಪ್ರಥಮ ಟೆಲಿಸ್ಕೋಪ್ ತರಬೇತಿ ಶಿಬಿರದಲ್ಲಿ ಪಾಲ್ಗೊಂಡು ಭಾರತ ಹಾಗೂ ಅಂತಾರಾಷ್ಟ್ರೀಯ ಖ್ಯಾತಿ ಪಡೆದ ವಿಜ್ಞಾನಿಗಳೊಂದಿಗೆ ಸಂವಾದದಲ್ಲಿ ಪಾಲ್ಗೊಂಡು, ಸ್ವತಃ ತಾನೇ ಟೆಲಿಸ್ಕೋಪ್ ತಯಾರಿಸಿ ದಾಖಲೆ ಬರೆದಿದ್ದಾನೆ.

ಗದಗ ಗ್ರಾಮೀಣ ಘಟಕದಿಂದ ಆಯ್ಕೆಯಾದ ಸಿದ್ದಾರ್ಥ್ ಬಡ್ನಿ ರಾಜ್ಯಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಚಿನ್ನದ ಪದಕ, ರಾಷ್ಟಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಕಂಚಿನ ಪದಕ ಪಡೆದು ಥೈಲ್ಯಾಂಡ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾನೆ.

ನರಗುಂದ ತಾಲೂಕಿನಿಂದ ಆಯ್ಕೆಯಾದ ಅಪೂರ್ವ ವಡ್ಡರ್ ವಿಶೇಷ ಪ್ರತಿಭೆಯಾಗಿದ್ದು, ರಾಜ್ಯಮಟ್ಟದ ಅಬ್ಯಾಕಸ್ ಸ್ಪರ್ಧೆಯಲ್ಲಿ ಭಾಗವಹಿಸಿ ಸತತವಾಗಿ ಮೂರು ಬಾರಿ ಪ್ರಥಮ ಸ್ಥಾನ ಪಡೆದು 500ರವರೆಗೆ ಮಗ್ಗಿಗಳನ್ನು ತಪ್ಪಿಲ್ಲದೆ ಹೇಳುವುದು, ಕೇವಲ ಎಂಟು ನಿಮಿಷದಲ್ಲಿ 193 ಲೆಕ್ಕಗಳನ್ನು ಬಿಡಿಸಿ ಪ್ರಥಮ ಸ್ಥಾನ ಪಡೆದು ಸಾಧನೆಗೈದಿದ್ದಾಳೆ.

ಮುಂಡರಗಿ ತಾಲೂಕಿನಿಂದ ಆಯ್ಕೆಯಾದ ರಕ್ಷಿತಾ ಚುರ್ಚಿಹಾಳ್ ಜಪಾನಿನ ಟೋಕಿಯೋದಲ್ಲಿ ನಡೆದ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಹಾಟ್ ಕುಕಿಂಗ್ ವ್ಯಸಲ್ ಕಿಟ್ ಎಂಬ ಪ್ರಾಜೆಕ್ಟ್‌ನ್ನು ಮಂಡಿಸಿ ಬಹುಮಾನ ಪಡೆದಿದ್ದಾರೆ.

ಗಜೇಂದ್ರಗಡ ತಾಲೂಕಿನಿಂದ ಆಯ್ಕೆಯಾದ ಪೂರ್ವಿ ಜೋಶಿ ಬೆಳಗಾವಿ ವಿಭಾಗ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಕ್ತಿಗೀತೆ ವಿಭಾಗದಲ್ಲಿ ಪ್ರಥಮ ಸ್ಥಾನವನ್ನು ಪಡೆದು ರಾಜ್ಯಮಟ್ಟದಲ್ಲೂ ಪ್ರಥಮ ಸ್ಥಾನ ಪಡೆದು ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾಳೆ. ಜೊತೆಗೆ ಜಿಲ್ಲಾ ಮಟ್ಟದ ಚರ್ಚಾ ಸ್ಪರ್ಧೆ ಹಾಗೂ ಅಣುಕು ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಿ ಬಹುಮಾನ ಪಡೆದಿದ್ದಾಳೆ.

ರೋಣ ತಾಲೂಕಿನಿಂದ ಆಯ್ಕೆಯಾದ ಥಲಕೇಶ್ ಪಾಟೀಲ್ ಅತಿ ಚಿಕ್ಕ ವಯಸ್ಸಿನಿಂದಲೇ ಓದು-ಬರಹ, ಲೆಕ್ಕ ವಿಷಯದಲ್ಲಿ ಅಪಾರವಾದ ಆಸಕ್ತಿಯನ್ನು ಹೊಂದಿ, ಪ್ರಾಚ್ಯ ಪ್ರಜ್ಞೆ ರಸಪ್ರಶ್ನೆ, ವಿಜ್ಞಾನ ರಸಪ್ರಶ್ನೆ, ಚರ್ಚಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಜಿಲ್ಲಾ ಹಂತದಲ್ಲಿ ಬಹುಮಾನ ಪಡೆದು ರಾಜ್ಯ ಮಟ್ಟದವರೆಗೂ ಭಾಗವಹಿಸಿದ್ದು ವಿಶೇಷವಾಗಿದೆ.

ಲಕ್ಷ್ಮೇಶ್ವರ ತಾಲೂಕಿನಿಂದ ಆಯ್ಕೆಯಾದ ಕೃಷ್ಣಪ್ರಿಯಾ ಬದಿ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತವನ್ನು ಅಭ್ಯಾಸ ಮಾಡಿ, ಬೆಂಗಳೂರಿನಲ್ಲಿ ನಡೆದ ರಾಜ್ಯಮಟ್ಟದ ಸಂಗೀತ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಕಲಾಶ್ರೀ ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ. ಜೊತೆಗೆ ಚಿತ್ರಕಲೆ, ಯೋಗಾಸನ, ಕ್ರಾಫ್ಟ್, ವಚನ ಕಂಠಪಾಠ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆಗೈದು ಜಿಲ್ಲೆಗೆ ಕೀರ್ತಿ ತಂದಿದ್ದಾಳೆ. ಈ ಎಂಟು ಮಕ್ಕಳ ವಿಶೇಷ ಸಾಧನೆಯ ಸಮಾಗಮವಾದ ಈ ಸಮ್ಮೇಳನದಲ್ಲಿ 'ಜಿಲ್ಲಾ ಬಾಲ ಶರಣಸಿರಿ ಪ್ರಶಸ್ತಿ'ಯನ್ನು ನೀಡಿ ಗೌರವಿಸಲಾಗುತ್ತಿದೆ.

ಸಮ್ಮೇಳನವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಕೆ.ಎ. ಬಳಿಗೇರವರು ಶ್ರಮಿಸಿದ್ದಾರೆ. ಇವರ ಜೊತೆ-ಗೂಡಿ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಎಲ್ಲ ತಾಲೂಕಾಧ್ಯಕ್ಷರು, ಪದಾಧಿಕಾರಿಗಳು ಹಾಗೂ ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷರು, ಎಲ್ಲ ತಾಲೂಕಿನ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರು, ಪದಾಧಿಕಾರಿಗಳು ಸಹಕರಿಸಿದ್ದಾರೆ. ಇಂತಹ ವಿನೂತನವಾದ ಕಾರ್ಯಕ್ರಮಕ್ಕೆ ಗದಗ ಜಿಲ್ಲೆಯ ಪರಮಪೂಜ್ಯರು ಎಲ್ಲ ಶರಣ ಬಂಧುಗಳು ಆಗಮಿಸಲಿದ್ದು, ಈ ಕಾರ್ಯಕ್ರಮಕ್ಕೆ ಪ್ರತ್ಯಕ್ಷವಾಗಿ ಪರೋಕ್ಷವಾಗಿ ಸಹಕಾರ ನೀಡುತ್ತಿರುವ ಎಲ್ಲಿ ಶರಣ ಬಂಧುಗಳಿಗೆ ಧನ್ಯವಾದಗಳು.



**- ಸುಧಾ ಹುಚ್ಚಣ್ಣವರ.**
ಜಿಲ್ಲಾಧ್ಯಕ್ಷರು, ಕದಳಿ ಮಹಿಳಾ ವೇದಿಕೆ.

## ಹಾಲು ಉತ್ಪಾದಕರಿಗೆ 1 ಲೀಟರ್ ಹಾಲಿನ ಪ್ರೋತ್ಸಾಹಧನ 5 ರಿಂದ 7 ರೂಗೆ ಏರಿಕೆ: ಅಧಿವೇಶನದಲ್ಲಿ ಸಿದ್ದರಾಮಯ್ಯ ಘೋಷಣೆ

**■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ರೈತರ ಹಿತದೃಷ್ಟಿಯಿಂದ 1 ಲೀಟರ್ ಹಾಲಿಗೆ ಪ್ರೋತ್ಸಾಹಧನವನ್ನು 7 ರೂಪಾಯಿಗೆ ಏರಿಕೆ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಡಿಸೆಂಬರ್ 19ರಂದು ಬೆಳಗಾವಿ ಅಧಿವೇಶನದ ಕೊನೆಯ ದಿನ ಮಾತನಾಡಿದ ಅವರು, ರೈತರಿಗೆ ಹಸುಗಳನ್ನು ಸಾಕಿ ಮೇವು ನೀಡಲು ಹೆಚ್ಚು ಖರ್ಚುಗಳು ಆಗುತ್ತವೆ. ಮೇವು ಸಾಕಾಣಿಕೆಗೆ ರೈತರಿಗೆ ನೆರವಾಗಲು, ಮೇವಿನ ಹಿಂಡಿ ದರ ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ ನಮ್ಮ ಸರ್ಕಾರದಿಂದ ಪ್ರತಿಲೀಟರ್ ಹಾಲಿನ ಮೇಲೆ 5 ರೂಪಾಯಿ ಸಹಾಯಧನವನ್ನು ಹಿಂದೆ ನೀಡಲಾಗುತ್ತಿತ್ತು. ಅದನ್ನೀಗ ಈ ವರ್ಷದ ಅವಧಿಯಲ್ಲೇ 7 ರೂಪಾಯಿಗೆ ಹೆಚ್ಚಿಸುತ್ತಿದ್ದೇವೆ ಎಂದು ಘೋಷಿಸಿದ್ದಾರೆ.

ಬೆಳಗಾವಿ ಅಧಿವೇಶನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೈತರ ಹಿತದೃಷ್ಟಿಯಿಂದ ಮಹತ್ವದ ಘೋಷಣೆ ಮಾಡಿದ್ದಾರೆ. ಸದ್ಯ ಪ್ರತಿ ಲೀಟರ್ ಹಾಲಿಗೆ ನೀಡುತ್ತಿರುವ 5 ರೂಪಾಯಿ ಪ್ರೋತ್ಸಾಹಧನವನ್ನು ಈ ವರ್ಷದ ಅವಧಿಯಲ್ಲಿ 7 ರೂಪಾಯಿಗೆ ಹೆಚ್ಚಿಸುವುದಾಗಿ ತಿಳಿಸಿದ್ದಾರೆ.



ಪ್ರಸ್ತುತ ಪ್ರೋತ್ಸಾಹಧನವು ರೈತರಿಗೆ ಸಂಪೂರ್ಣವಾಗಿ ತಲುಪುತ್ತಿಲ್ಲ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಬೆಲೆ ಏರಿಕೆ ಹೊರತಾಗಿಯೂ ಸರ್ಕಾರದಿಂದ ನೆರವು ಮುಂದುವರಿಯುತ್ತದೆ ಎಂದು ಭರವಸೆ ನೀಡಿದರು.

ತಮ್ಮ ಸರ್ಕಾರದ ಹಿಂದಿನ ಅವಧಿಯ (2013-18) ಪ್ರಣಾಳಿಕೆ ಭರವಸೆಗಳನ್ನು ಪ್ರಸ್ತಾಪಿಸಿದ ಸಿದ್ದರಾಮಯ್ಯ,165 ಭರವಸೆಗಳ ಪೈಕಿ 158 ಭರವಸೆಗಳನ್ನು ಈಡೇರಿಸಲಾಗಿದೆ ಎಂದು ಸ್ಪಷ್ಟಪಡಿಸಿದರು. ಇದರ ಜೊತೆಗೆ ಬಜೆಟ್‌ನಲ್ಲಿ ಘೋಷಿಸದೆ 30 ಹೊಸ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ ಎಂದರು. ಪ್ರಸ್ತುತ (2023ರ ನಂತರ) ಪ್ರಣಾಳಿಕೆಯಲ್ಲಿನ 593 ಭರವಸೆಗಳ ಪೈಕಿ 293 ಭರವಸೆಗಳನ್ನು ಈಗಾಗಲೇ ಈಡೇರಿಸಲಾಗಿದ್ದು, ಉಳಿದ ಭರವಸೆಗಳನ್ನು ಮುಂದಿನ ಮೂರು ಬಜೆಟ್‌ಗಳಲ್ಲಿ ಈಡೇರಿಸಲಾಗುವುದು ಎಂದು ಹೇಳಿದರು.

**ಶ್ರೀ ಆನಂದಮಯೀ ಶಿರಡಿ ಸಾಯಿಬಾಬಾ ಮಂದಿರದದಲ್ಲಿ ಕಾರ್ತಿಕ ದೀಪೋತ್ಸವ**

# ಶಿರಡಿ ಸಾಯಿಬಾಬಾ ಸಮಾಜಕ್ಕೆ ಬೆಳಕಾಗಿದ್ದಾರೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇವರು, ದೇವಮಾನವರಲ್ಲಿ ಅಚಲವಾದ ನಂಬಿಕೆ, ವಿಶ್ವಾಸವಿರಿಸಿಕೊಂಡರೆ ಅದು ಖಂಡಿತ ಶ್ರೇಷ್ಠವಾದ ಫಲವನ್ನೇ ನೀಡುತ್ತದೆ. ದೇವರ ಸನ್ನಿಧಿಯಲ್ಲಿ ನಿಷ್ಕಲ್ಮಶ ಮನಸ್ಸಿನಿಂದ ಬೆಳಗುವ ಧರ್ಮದ ದೀಪದಿಂದ ಮನುಷ್ಯನಲ್ಲಿನ ಅರಿಷಡ್ವರ್ಗಗಳು ಕಳೆದು, ಸುಜ್ಞಾನದ ಬೆಳಕು ಹರಿದು ಬದುಕು ಬಂಗಾರವಾಗುತ್ತದೆ ಎಂದು ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನ ಮಠದ ಶ್ರೀ ಜ.ಫಕೀರ ಸಿದ್ದರಾಮ ಮಹಾಸ್ವಾಮಿಗಳು ಹೇಳಿದರು.

ಅವರು ಗುರುವಾರ ಶ್ರೀ ಆನಂದಮಯೀ ಶಿರಡಿ ಸಾಯಿಬಾಬಾ ಮಂದಿರದದಲ್ಲಿ ಕಾರ್ತಿಕ ದೀಪೋತ್ಸವದ ಅಂಗವಾಗಿ ಸಿದ್ಧಲಿಂಗಯ್ಯಶಾಸ್ತ್ರಿಗಳು ಹಿರೇಮಠ ಮತ್ತು ಶಿಷ್ಯವೃಂದದ ನೇತೃತ್ವದಲ್ಲಿ ಲೋಕಕಲ್ಯಾಣಾರ್ಥವಾಗಿ ನಡೆದ ವಿಶೇಷ ಪೂಜೆ, ರುದ್ರಾಭಿಷೇಕ, ಗಣಹೋಮ, ಮೃತ್ಯುಂಜಯ, ಬೃಹಸ್ಪತಿ ಹೋಮ, ಅಕ್ಷರಾಭ್ಯಾಸ, ಪಂಚಾರತಿ, ಸಂಜೆ ಕಾರ್ತಿಕ ದೀಪೋತ್ಸವ, ಪಲ್ಲಕ್ಕಿ ಸೇವೆ ಕಾರ್ಯಕ್ರಮಗಳ ಸಾನ್ನಿಧ್ಯ ವಹಿಸಿ ಆಶೀರ್ವನ ನೀಡಿದರು.



ದೇವರೊಬ್ಬ ನಾಮ ಹಲವು. ನಾವು ಮಾಡುವ ಕಾರ್ಯದಲ್ಲಿ ದೇವರು, ಧರ್ಮವನ್ನು ಕಾಣಬೇಕು. ಶಿರಡಿ ಶ್ರೀ ಸಾಯಿಬಾಬಾರನ್ನು ಹಿಂದೂ, ಮುಸ್ಲಿಂ ಸೇರಿದಂತ ಎಲ್ಲ ಧರ್ಮದ ಅನುಯಾಯಿಗಳು ಪೂಜಿಸುತ್ತಾರೆ. ಅವರ ಅನುಯಾಯಿಗಳು ಅವರನ್ನು ಸಂತ, ಫಕೀರ, ಅವತಾರ ಅಥವಾ ಸದ್ಗುರು ಎಂದು ಪರಿಗಣಿಸುತ್ತಾರೆ. ಅವರು ಧರ್ಮ ಅಥವಾ ಜಾತಿಯ ಆಧಾರದ ಮೇಲೆ ಯಾವುದೇ ವ್ಯತ್ಯಾಸವನ್ನು ಮಾಡಲಿಲ್ಲ. ಅವರು ಪ್ರೀತಿ, ಕ್ಷಮೆ, ಇತರರಿಗೆ ಸಹಾಯ ಮಾಡುವುದು, ದಾನ, ನೆಮ್ಮದಿ, ಆಂತರಿಕ ಶಾಂತಿ, ದೇವರು ಮತ್ತು ಗುರುವಿನ ಭಕ್ತಿಯನ್ನು ಹೊಂದಿ ಸಮಾಜಕ್ಕೆ ಬೆಳಕಾಗಿದ್ದಾರೆ. ಇಂತಹ ಪುಣ್ಯ ಪುರುಷರ ಸ್ಮರಣೆಯೊಂದಿಗೆ ದೀಪ ಬೆಳಗಿಸುವುದರಿಂದ ನಮ್ಮೆಲ್ಲರ ಬಾಳು ಬೆಳಕಾಗುತ್ತದೆ ಎಂದರು.


> ಗಂಜಿಗಟ್ಟಿಯ ಶಿವಲಿಂಗೇಶ್ವರ ಶಿವಾಚಾರ್ಯರು ಆಶೀರ್ವನ ನೀಡಿ, ದೀಪ ತಾನುರಿದು ಕತ್ತಲೆ ಸರಿಸಿ ಜಗಕೆ ಬೆಳಕು ನೀಡುವಂತೆ ಮನುಷ್ಯ ಪರಸ್ಪರ ಸ್ನೇಹ, ಪ್ರೀತಿ, ಕರುಣೆ, ವಿಶ್ವಾಸ ಮತ್ತು ಮಾನವೀಯ ಮೌಲ್ಯಗಳಿಂದ ಸಮಾಜಕ್ಕೆ ಬೆಳಕಾಗುವ ಕೆಲಸ ಮಾಡಬೇಕು. ಪರಿಶುದ್ಧ ಮತ್ತು ಸತ್ಯಧರ್ಮನಿಷ್ಠತೆಯಿಂದ ತನ್ನ ಬಳಿ ಬರುವ ಭಕ್ತರ ಕಷ್ಟ-ಸಂಕಟಗಳನ್ನು ಸಂತ ಸದ್ಗುರು ಸಾಯಿಬಾಬಾ ಅವರು ದೂರ ಮಾಡಿ ಶಾಂತಿ, ಸಮೃದ್ಧಿ, ಸುಖ, ನೆಮ್ಮದಿ ಕರುಣಿಸುತ್ತಾರೆ. ಒಬ್ಬ ವ್ಯಕ್ತಿಯು ಲೌಕಿಕ ಜೀವನದ ದುಃಖಗಳನ್ನು ಹೋಗಲಾಡಿಸಲು ಬಯಸಿ ಸಾಯಿಬಾಬಾರನ್ನು ಆರಾಧಿಸಿದರೆ ಅದು ಖಂಡಿತವಾಗಿಯೂ ನೆರವೇರುತ್ತದೆ ಎಂದರು.

ಸಂಜೆ ಕಾರ್ತಿಕೋತ್ಸವದಲ್ಲಿ ಪಟ್ಟಣ ಸೇರಿ ಸುತ್ತಲಿನ ಗ್ರಾಮದಿಂದ ನೂರಾರು ಭಕ್ತರು ಆಗಮಿಸಿದ್ದರು. ದೀಪೋತ್ಸವದ ಬಳಿಕ ಸಾರ್ವಜನಿಕ ಪ್ರಸಾದ ಸೇವೆ ಮಾಡಲಾಗಿತ್ತು. ಭಕ್ತರಾದ ರಾಮು ಗಡದವರ, ರಾಜಣ್ಣ ಕುಂಬಿ, ವಿಜಯ ಹತ್ತಿಕಾಳ ಅಶ್ವಿನಿ ಅಂಕಲಕೋಟಿ, ಸಂತೋಷ ಬಾಳಿಕಾಯಿ, ಶಂಕರ ಬ್ಯಾಡಗಿ, ದಿಳ್ಳೆಪ್ಪ ಅಮರಾಪುರ, ಶೇಖಣ್ಣ ಹತ್ತಿಕಾಳ, ಸೋಮೇಶ ಉಪನಾಳ, ಪ್ರವೀಣ ಬೋಮಲೆ, ನೀಲಪ್ಪ ಶರಸೂರಿ, ನೀಲಕಂಠಪ್ಪ ಬಂಕಾಪುರ, ರಾಮು ಅಡಗಿಮನಿ, ವಾಣಿ ಮಠಪತಿ, ವಿಜಯಕ್ಕ ಪಿಳ್ಳಿ, ರಾಜೇಶ್ವರಿ ಮೊಗಲಿ, ಸರೋಜಾ ಬನ್ನೂರ, ಯಲ್ಲಪ್ಪ ಕುಂಬಾರ, ಫಕ್ಕಿರೇಶ ಅಡರಕಟ್ಟಿ, ಅಣ್ಣಪ್ಪ ಸಂಶಿ, ಮಲ್ಲೇಶ ಕಿತ್ತೂರ ಮುಂತಾದವರಿದ್ದರು.

## ಬಾಂಗ್ಲಾ ದಂಗೆ: ಮಾಧ್ಯಮ ಸಂಸ್ಥೆಗಳಿಗೆ ಬೆಂಕಿ ಹಚ್ಚಿದ ಪ್ರತಿಭಟನಾಕಾರರು, ಉರಿಯುತ್ತಿದ್ದ ಕಚೇರಿಗಳಿಂದ 25 ಕ್ಕೂ ಹೆಚ್ಚು ಪತ್ರಕರ್ತರ ರಕ್ಷಣೆ

**■ ವಿಜಯಸಾಕ್ಷಿ ಸುದ್ದಿ, ಬಾಂಗ್ಲಾದೇಶ**

ಜುಲೈ ದಂಗೆಯ ನಾಯಕ ಷರೀಫ್ ಉಸ್ಮಾನ್ ಹಾದಿ ಅವರ ನಿಧನದ ಸುದ್ದಿ ಕೇಳಿದ ಬೆನ್ನಲ್ಲೇ ಶುಕ್ರವಾರ ಬಾಂಗ್ಲಾದೇಶದ ವಿವಿಧ ಭಾಗಗಳಲ್ಲಿ ತೀವ್ರ ಪ್ರತಿಭಟನೆಗಳು ಆರಂಭವಾಗಿದ್ದು ಹಿಂಸಾಚಾರಕ್ಕೆ ನಾಂದಿ ಹಾಡಿವೆ. ಅನೇಕ ಪ್ರತಿಭಟನಾಕಾರರು ಬೀದಿಗಿಳಿದಿದ್ದು, ದೇಶದ ಪ್ರಮುಖ ದಿನಪತ್ರಿಕೆಗಳಾದ 'ಪ್ರೋಥೋಮ್ ಅಲೋ' ಹಾಗೂ 'ಡೈಲಿ ಸ್ಟಾರ್' ಕಚೇರಿಗಳಿಗೆ ಬೆಂಕಿ ಹಚ್ಚಿದ್ದಾರೆ. ಈ ಕುರಿತಾದ ವಿಡಿಯೊಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ.




ಢಾಕಾದ ಬಿಜೋಯ್‌ನಗರ ಪ್ರದೇಶದಲ್ಲಿ ಚುನಾವಣಾ ಪ್ರಚಾರಕ್ಕೆ ಸಿದ್ಧತೆ ನಡೆಸುತ್ತಿದ್ದ ವಿದ್ಯಾರ್ಥಿ ನಾಯಕ ಷರೀಫ್ ಉಸ್ಮಾನ್ ಹಾದಿ ಅವರ ತಲೆಗೆ ಮುಸುಕುಧಾರಿಯೊಬ್ಬ ಕಳೆದವಾರ ಗುಂಡು ಹಾರಿಸಿದ್ದ. ಗಂಭೀರ ಸ್ಥಿತಿಯಲ್ಲಿದ್ದ ಅವರಿಗೆ ಸಿಂಗಪುರದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಚಿಕಿತ್ಸೆ ಫಲಕಾರಿಯಾಗದೆ ಅವರು, ಗುರುವಾರ ಮೃತಪಟ್ಟಿದ್ದಾರೆ ಎಂಬ ವಿಚಾರ ತಿಳಿದು ಬಂದಿದೆ. ನಿಧನದ ಸುದ್ದಿ ಹೊರಬೀಳುತ್ತಿದ್ದಂತೆ, ಭಾರತ ವಿರೋಧಿ ಘೋಷಣೆಗಳೂ ಮೊಳಗಲಾರಂಭಿಸಿವೆ.

ಪತ್ರಿಕಾ ಕಚೇರಿಗಳ ಮೇಲೆ ಗುರುವಾರ ಮಧ್ಯರಾತ್ರಿ ದಾಳಿ ಮಾಡಿರುವ ಪ್ರತಿಭಟನಾಕಾರರು, ಕಟ್ಟಡಗಳಿಗೆ ಬೆಂಕಿ ಹಚ್ಚಿದ್ದಾರೆ. ಮಧ್ಯರಾತ್ರಿಯಲ್ಲಿ, ಪ್ರತಿಭಟನಾಕಾರರು ಬಂಗಾಳಿ ಭಾಷಾ ದಿನಪತ್ರಿಕೆ ಮತ್ತು ಇಂಗ್ಲಿಷ್ ದಿನಪತ್ರಿಕೆ ಎರಡರ ಕಟ್ಟಡಗಳನ್ನು ಧ್ವಂಸಗೊಳಿಸಿ ಬೆಂಕಿ ಹಚ್ಚಿದ್ದಾರೆ. ಪ್ರತಿಭಟನಾಕಾರರು ಮೊದಲು ಪ್ರೋಥೋಮ್ ಅಲೋ ಅವರ ಕಚೇರಿಯನ್ನು ಧ್ವಂಸಗೊಳಿಸಿದರು ಮತ್ತು ನಂತರ ಡೈಲಿ ಸ್ಟಾರ್ ಕಚೇರಿಯ ಮೇಲೆ ದಾಳಿ ಮಾಡಿದ್ದಾರೆ..

ಪ್ರತಿಭಟನಾಕಾರರು ಮೊದಲು ಡೈಲಿ ಸ್ಟಾರ್ ಕಚೇರಿಯ ಮೊದಲ ಎರಡು ಮಹಡಿಗಳನ್ನು ಧ್ವಂಸಗೊಳಿಸಿ ಬೆಂಕಿ ಹಚ್ಚಿದ್ದಾರೆ. ಆ ಸಮಯದಲ್ಲಿ ಕಟ್ಟಡದಲ್ಲಿದ್ದ ರಾತ್ರಿ ಪಾಳಿ ಸಿಬ್ಬಂದಿ ಆಶ್ರಯಕ್ಕಾಗಿ ಛಾವಣಿಯ ಮೇಲೆ ಧಾವಿಸಿದಾಗ ಬೆಂಕಿಯು ಎರಡು ಮಹಡಿಗಳನ್ನು ಬೇಗನೆ ಆವರಿಸಿದೆ.

## ತಾಲೂಕಿನಾದ್ಯಂತ ಎಳ್ಳ ಅಮವಾಸ್ಯೆ ಸಂಭ್ರಮ



**■ ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ತಾಲೂಕಿನಾದ್ಯಂತ ಅನ್ನದಾತರ ಹಬ್ಬ ಎಳ್ಳ ಅಮವಾಸ್ಯೆಯನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ಬಾರಿ ಮುಂಗಾರಿನಲ್ಲಿ ಅತಿಯಾದ ಮಳೆಯಿಂದ ಬೆಳೆಗಳು ಕೈಕೊಟ್ಟರೂ ಸಹ ಎಳ್ಳ ಅಮವಾಸ್ಯೆ ಹಬ್ಬದ ಮೇಲೆ ಪರಿಣಾಮ ಬೀರಿಲ್ಲ. ಜಮೀನುಗಳಲ್ಲಿ ಬೆಳೆಯಲಾದ ಬೆಳೆಗಳಿಗೆ ನಮಿಸಿದ ರೈತರು ವಿಶೇಷ ಪೂಜೆಯನ್ನು ಸಲ್ಲಿಸಿ ಚರಗ ಚೆಲ್ಲಿದರು. ಜಮೀನುಗಳಲ್ಲಿರುವ ಬನ್ನಿ ಮರಕ್ಕೂ ಸಹ ಪೂಜೆಯನ್ನು ಸಲ್ಲಿಸಿ ಬೆಳೆಗಳು ಹುಲುಸಾಗಿ ಬರಲಿ ಎಂದು ಪ್ರಾರ್ಥಿಸಿದರು.

ಹಬ್ಬದ ನಿಮಿತ್ತ ರೈತರು ಎತ್ತಿನ ಬಂಡಿಗಳಿಗೆ ಅಲಂಕಾರ ಮಾಡಿ ಜಮೀನುಗಳಿಗೆ ತೆರಳುತ್ತಿರುವ ದೃಶ್ಯ ಗ್ರಾಮೀಣ ಭಾಗಗಳಲ್ಲಿ ಕಂಡುಬಂದಿತು. ಜಾತಿ-ಧರ್ಮಗಳ ಭೇದವಿಲ್ಲದೆ ಎಲ್ಲರೂ ಸೇರಿಕೊಂಡು ಎಳ್ಳ ಅಮವಾಸ್ಯೆ ಹಬ್ಬವನ್ನು ಆಚರಿಸಿದರು.

# ಸನ್ಮಾರ್ಗ ಕಾಲೇಜಿನಲ್ಲಿ 'ಸನ್ಮತಿ' ಸಮಾರಂಭ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಡಿ. 20ರ ಬೆಳಿಗ್ಗೆ 10 ಗಂಟೆಗೆ ಪದವಿಪೂರ್ವ ದ್ವಿತೀಯ ವಿಜ್ಞಾನ ಹಾಗೂ ವಾಣಿಜ್ಯ ವಿದ್ಯಾರ್ಥಿಗಳಿಗೆ ಬೀಳ್ಕೊಡುವ 'ಸನ್ಮತಿ' ಸಮಾರಂಭವು ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದ ಲಾಯನ್ಸ್ ಸ್ಕೂಲಿನ ಶ್ರೀ ಲಕ್ಷ್ಮಣರಾವ್ ಪೋತ್ನಿಸ್ ಮೆಮೊರಿಯಲ್ ಹಾಲ್‌ನಲ್ಲಿ ಜರುಗಲಿದೆ.

ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕ ಎಸ್.ಬಿ. ಮಸನಾಯಕ, ಹಾಗೂ ಅತಿಥಿಗಳಾಗಿ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಮಾಜಿ ಅಧ್ಯಕ್ಷ, ಜೀವಮಾನ ಸಾಧನೆ ಪ್ರಶಸ್ತಿ ಪುರಸ್ಕೃತ ಚಂದ್ರು ಜೆ.ಬಾಳಿಹಳ್ಳಿಮಠ ಆಗಮಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಸ್ಟೂಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಅಧ್ಯಕ್ಷರಾದ ಪ್ರೊ. ರಾಜೇಶ ಎಸ್.ಕುಲಕರ್ಣಿ ವಹಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಕಳೆದ ಶೈಕ್ಷಣಿಕ ವರ್ಷದಲ್ಲಿ ಹಾಗೂ ಪ್ರಸ್ತುತ ವರ್ಷದಲ್ಲಿ ವಿಶೇಷ ಪ್ರತಿಭೆಯನ್ನು ಮೆರೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಾಗೂ ಕ್ರೀಡಾ ವಿಜೇತರಿಗೆ ಬಹುಮಾನ ವಿತರಣೆ ಸಮಾರಂಭ ಜರುಗಲಿದೆ ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪ್ರೇಮಾನಂದರೋಣದ ಹಾಗೂ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ ರಾಜ್ಯ ಮಟ್ಟದ ಪಂದ್ಯಾವಳಿ ಉದ್ಘಾಟನೆ ಇಂದು**

# ಜಿಲ್ಲಾ ಕ್ರೀಡಾಂಗಣದಲ್ಲಿ ಟೆನ್ನಿಕಾಯಿಟ್ ಪಂದ್ಯಾವಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ, ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘ ಧಾರವಾಡ, ರಾಜ್ಯ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ, ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘ ಜಿಲ್ಲಾ ಘಟಕ ಹಾಗೂ ಕರ್ನಾಟಕ ರಾಜ್ಯ ಪದವಿಪೂರ್ವ ಶಿಕ್ಷಣ ಇಲಾಖೆಯ ಬೋಧಕೇತರ ನೌಕರರ ಸಂಘ ಜಿಲ್ಲಾ ಘಟಕ ಗದಗ ಇವರುಗಳ ಸಹಯೋಗದಲ್ಲಿ 2025–26ನೇ ಸಾಲಿನ ರಾಜ್ಯ ಮಟ್ಟದ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ ಟೆನ್ನಿಕಾಯಿಟ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭ ಡಿ. 20ರಂದು ಸಾಯಂಕಾಲ 4 ಗಂಟೆಗೆ



ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ, ಶಾಲಾ ಶಿಕ್ಷಣ ಇಲಾಖೆ ನಿರ್ದೇಶಕ ಭರತ್ ಎಸ್, ಜಿಲ್ಲಾಧಿಕಾರಿ ಮತ್ತು ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಆಗಮಿಸುವರು.

ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಿಕ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಕ್ರೀಡಾ ವಿಭಾಗದ ಶಾಲಾ ಶಿಕ್ಷಣ ಇಲಾಖೆ ಪ.ಪೂ. ಸಹಾಯಕ ನಿರ್ದೇಶಕ ಕೆ.ಎನ್. ಶಿವಮಾದಯ್ಯ, ರಾಜ್ಯ ಪದವಿಪೂರ್ವ ಕಾಲೇಜು ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಅಧ್ಯಕ್ಷ ಟಿ.ಆರ್. ಬಸವರಾಜ, ಗದಗ ಜಿಲ್ಲೆಯ ಎಲ್ಲ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರು, ಉಪನ್ಯಾಸಕರು, ದೈಹಿಕ ಶಿಕ್ಷಣ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿ ವೃಂದದವರು ಕಾರ್ಯಕ್ರಮಕ್ಕೆ ಸ್ವಾಗತ ಕೋರಿದ್ದಾರೆ.

# ಸಮಾಜ ಸೇವೆಗೆ ಎನ್‌ಎಸ್‌ಎಸ್ ಉತ್ತಮ ವೇದಿಕೆ




■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮಾಜಕ್ಕೆ ಸೇವೆ ಸಲ್ಲಿಸಬಯಸುವವರಿಗೆ ಎನ್‌ಎಸ್‌ಎಸ್ ಒಂದು ಉತ್ತಮ ವೇದಿಕೆಯಾಗಿದೆ. ಈ ವಾರ್ಷಿಕ ಶಿಬಿರದಲ್ಲಿ ಕಲಿತ ಮಹತ್ವದ ಅಂಶಗಳನ್ನು ನೀವು ಜೀವನದಲ್ಲಿ ಅಳವಡಿಸಿಕೊಂಡರೆ ಮುಂದೊಂದು ದಿನ ನೀವು ಉತ್ತಮ ಸಮಾಜ ಸೇವಕರಾಗುತ್ತೀರಿ ಎಂದು ನರೇಗಲ್ಲ ಸರಕಾರಿ ಪದವಿ ಕಾಲೇಜಿನ ಪ್ರಾಚಾರ್ಯ ಎಸ್.ಎಲ್. ಗುಳೇದಗುಡ್ಡ ಹೇಳಿದರು.

ಕೋಟುಮಚಗಿಯಲ್ಲಿ ನರೇಗಲ್ಲದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರಕಾರಿ ಪದವಿ ಮಹಾವಿದ್ಯಾಲಯದ ಎನ್‌ಎಸ್‌ಎಸ್ ವಿಶೇಷ ಶಿಬಿರದ ಮುಕ್ತಾಯ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ದಿಸೆಯಿಂದಲೇ ಸಮಾಜದ ಸೇವೆಯನ್ನು ಹೇಗೆ ಮಾಡಬೇಕು ಎಂಬುದರ ಬಗ್ಗೆ ತರಬೇತಿ ನಿಡುವುದರಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಯಾವಾಗಲೂ ಮುಂದಿದೆ. ಇದರಿಂದ ತರಬೇತಿ ಪಡೆದ ಅದೆಷ್ಟೋ ಜನರು ಈಗ ಸಮಾಜ ಸೇವಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ನೀವೂ ಸಹ ನಿಮ್ಮನ್ನು ಸಿದ್ಧಪಡಿಸಿಕೊಂಡು ಸಮಾಜಸೇವೆಯಲ್ಲಿ ತೊಡಗಿಸಿಕೊಳ್ಳಿ. ಆ ಸಮಯದಲ್ಲಿ ಇಲ್ಲಿ ಪಡೆದ ತರಬೇತಿಯನ್ನು ನೀವು ಸ್ಮರಿಸಿಕೊಳ್ಳಿರಿ ಎಂದು ಹೇಳಿದರು.

ಸಾವಯವ ಕೃಷಿಕ ವೀರೇಶ ನೇಗಲಿ ಮಾತನಾಡಿ, ಈಗಿನಿಂದಲೇ ಕೃಷಿಯಲ್ಲಿ ಆಸಕ್ತಿಯನ್ನು ಬೆಳೆಸಿಕೊಳ್ಳಿ. ಸಾವಯವ ಕೃಷಿಗೆ ಹೆಚ್ಚು ಮಹತ್ವ ನೀಡಿ. ಇದರಿಂದ ಭೂಮಿಯ ಫಲವತ್ತತೆ ಹೆಚ್ಚಾಗುತ್ತದೆ. ಈ ವಿಷಯವನ್ನು ನಿಮ್ಮೂರಿನ ರೈತರಿಗೂ ತಿಳಿಸಿ, ಅವರಿಗೆ ರಾಸಾಯನಿಕ ಗೊಬ್ಬರದಿಂದ ದೂರ ಇರುವಂತೆ ಜಾಗೃತಿ ಮೂಡಿಸಿ ಎಂದರು.

ಶಿಬಿರದ ಸಂಯೋಜನಾಧಿಕಾರಿ ಸುನಂದಾ ಮುಂಜಿ ವರದಿ ವಾಚಿಸಿದರು. ಶಿಬಿರಾರ್ಥಿಗಳಿಂದ ಮನರಂಜನಾ ಕಾರ್ಯಕ್ರಮಗಳು ಜರುಗಿದವು.

# ನಿತೀಶ್ ಕುಮಾರ್ ವರ್ತನೆ ಖಂಡನೀಯ

■ ವಿಜಯಸಾಕ್ಷಿ ಸುದ್ದಿ, ಗದಗ



ಬಿಹಾರ ಸರ್ಕಾರ ಆಯೋಜಿಸಿದ್ದ ಆಯುಷ್ ಕಾರ್ಯಕ್ರಮದ ವೇದಿಕೆಯಲ್ಲಿ ಹಿಜಾಬ್ ಧರಿಸಿದ ಮಹಿಳಾ ವೈದ್ಯರೊಂದಿಗೆ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅಸಭ್ಯವಾಗಿ ವರ್ತಿಸಿರುವುದನ್ನು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ಖಂಡಿಸುತ್ತದೆ ಎಂದು ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ ಹೇಳಿದರು.

ಮಹಾಸಭಾದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಇದು ಭಾರತೀಯ ಸಂಸ್ಕೃತಿಯ ಲಕ್ಷಣವಲ್ಲ. ಹೀಗೆ ಒಬ್ಬ ಮಹಿಳೆಯ ಒಪ್ಪಿಗೆ ಇಲ್ಲದೆ ಆಕೆಯನ್ನು ಸ್ಪರ್ಶಿಸುವುದು ಮಹಿಳೆಯರಿಗೆ ಮಾಡುವ ಅವಮಾನವಾಗಿದೆ. ನೀತೀಶ್ ಕುಮಾರರು ಸಮಾಜವಾದಿ ತತ್ವದ ಹಿನ್ನೆಲೆಯಿಂದ ಬಂದವರು. ಜಯಪ್ರಕಾಶ್ ನಾರಾಯಣ್, ಮೊರಾರ್ಜಿ ದೇಸಾಯಿ, ರಾಮಕೃಷ್ಣ ಹೆಗಡೆ, ಯು.ಪಿ. ಸಿಂಗ್, ಚಂದ್ರಶೇಖರ್‌ರಂತಹ ಘಟಾನುಘಟಿಗಳ ನಾಯಕತ್ವದಲ್ಲಿ ಬೆಳೆದು ಬಂದವರು. ಇಂತಹ ವರ್ತನೆ ಅವರ ಘನತೆಗೆ ಶೋಭೆ ತರುವಂತದ್ದಲ್ಲ. ನಿತೀಶ್ ಕುಮಾರ್ ಅವರನ್ನು ಸಮರ್ಥಿಸಿಕೊಳ್ಳಲು ಅವರ ಸಂಪುಟದ ಸಚಿವ ಸಂಜಯ್ ನಿಸಾದ್ ಬಳಸಿದ ಅಸಾಂವಿಧಾನಿಕ ಪದಗಳನ್ನು ಯಾವುದೇ ನಾಗರಿಕ ಸಮಾಜವು ಒಪ್ಪದು. ಅವರು ಸಚಿವ ಸ್ಥಾನಕ್ಕೆ ಯೋಗ್ಯರಲ್ಲ. ಮಹಿಳೆಯರಿಗೆ ಗೌರವ ನೀಡದ ಇವರು ತಕ್ಷಣ ರಾಜೀನಾಮೆ ನೀಡಬೇಕೆಂದು ಅಗ್ರಹಿಸಿದರು.

# ನಾಲಿಗೆ ಒಳ್ಳೆಯದಾದರೆ ನಾಡೆಲ್ಲ ಒಳ್ಳೆಯದು




■ ವಿಜಯಸಾಕ್ಷಿ ಸುದ್ದಿ, ರಿಪ್ಪನ್‌ಪೇಟೆ

ಬಾಳುವುದಾದರೆ ಸಮುದ್ರದಂತೆ ಬಾಳಿ, ಬೇಕಾದವರು ನದಿಯಂತೆ ಬಂದು ನಿಮ್ಮನ್ನು ಸೇರುತ್ತಾರೆ ಎಂದು ಮಳಲಿ ಮಠದ ಡಾ. ಗುರುನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನುಡಿದರು.

ಅವರು ಸಮೀಪದ ಗವಟೂರು ಹೊಳೆಸಿದ್ದೇಶ್ವರ ದೇವಸ್ಥಾನ ಸಮಿತಿಯವರು ಹಮ್ಮಿಕೊಂಡ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ನಮ್ಮ ಕಣ್ಣು ಚೆನ್ನಾಗಿದ್ದರೆ ಇಡೀ ಜಗತ್ತು ನಮಗೆ ಚೆನ್ನಾಗಿ ಕಾಣುತ್ತದೆ. ನಮ್ಮ ನಾಲಿಗೆ ಒಳ್ಳೆಯದಾಗಿದ್ದರೆ ಇಡೀ ಜಗತ್ತಿಗೆ ನಾವು ಚೆನ್ನಾಗಿ ಕಾಣುತ್ತೇವೆ. ಯಥಾ ದೃಷ್ಟಿ; ತಥಾ ಸೃಷ್ಟಿ ಎಂಬಂತೆ ನಾಲಿಗೆ ಒಳ್ಳೆಯದಾದರೆ ನಾಡೆಲ್ಲಾ ಒಳ್ಳೆಯದು ಎಂಬ ಮಾತುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ ದಶಧರ್ಮ ಸೂತ್ರಗಳಲ್ಲಿ ಒಂದಾದ ದಾನದ ಮಹತ್ವ ಹೇಳುವಾಗ 'ಸಹಜ ದಾನಂ ಉತ್ಕೃಷ್ಟ ದಾನಂ' ಎಂದಿದ್ದಾರೆ. ಹಾಗಾಗಿ ಸತ್ಕಾರ್ಯಗಳಿಗೆ ದಾನವನ್ನು ಮಾಡುವುದು ಒಳಿತೆಂದರು.

ಸಮಾರಂಭದಲ್ಲಿ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ವೀರೇಶ ಆಲುವಳ್ಳಿ, ದೇವಸ್ಥಾನ ಸಮಿತಿಯ ಅಧ್ಯಕ್ಷ ಉಲ್ಲಾಸ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಧನಲಕ್ಷ್ಮಿ ಗಂಗಾಧರ, ದುಂಡರಾಜಪ್ಪಗೌಡ್ರು, ಗಂಗಾಧರ, ಅರುಣ, ಕುಬೇರಪ್ಪ, ಕೃಷ್ಣಯ್ಯಶೆಟ್ಟರು, ಜನಾರ್ಧನ್, ಎಂ.ಎಂ. ಪರಮೇಶಪ್ಪ, ಜೇನಿ ರಾಜು ಇತರರು ಉಪಸ್ಥಿತರಿದ್ದರು. ಚಂದ್ರಕಲಾ ಪ್ರಾರ್ಥಿಸಿದರು, ಜೆ.ಡಿ. ಮಲ್ಲಿಕಾರ್ಜುನ್ ಸ್ವಾಗತಿಸಿದರು. ನಾಗೇಂದ್ರ ನಿರೂಪಿಸಿದರು.



ಗದಗ ತಾಲೂಕಿನ ತಿಮ್ಮಾಪೂರ, ಹರ್ಲಾಪೂರ, ಲಕ್ಕುಂಡಿ, ಹಾತಲಗೇರಿ ಗ್ರಾಮದ ರೈತರು ಎಳ್ಳು ಅಮಾವಾಸ್ಯೆಯ ನಿಮಿತ್ತ ಹಿಂಗಾರು ಹಂಗಾಮಿನಲ್ಲಿ ಬೆಳೆದಿರುವ ಕಡಲೆ, ಗೋಧಿ ಜೋಳದ ಬೆಳೆಗಳಿಗೆ ಪೂಜೆ ಸಲ್ಲಿಸಿದರು. ರೈತರು ಕುಟುಂಬ ಪರಿವಾರ ಸಮೇತರಾಗಿ ಜಮೀನಿನ ಬೆಳೆಯ ಮಧ್ಯೆ ಇರುವ ಬನ್ನಿ ಮರಕ್ಕೆ ಪೂಜೆ ಸಲ್ಲಿಸಿದರು. ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ತಮ್ಮ ಜಮೀನಿನಲ್ಲಿ ಕುಟುಂಬ ಸಮೇತರಾಗಿ ಭೂರಮಗೆ ಬಾಗಿನ ಅರ್ಪಿಸಿ ರಾಜ್ಯದಲ್ಲಿ ರೈತ ಬೆಳೆದ ಎಲ್ಲಾ ಬೆಳೆಗಳು ಹುಲುಸಾಗಿ ಬೆಳೆದು ಉತ್ತಮ ಇಳುವರಿ ಬರಲಿ ಎಂದು ಪ್ರಾರ್ಥಿಸಿದರು.

# ಉತ್ತರ ಕರ್ನಾಟಕ ಅಭಿವೃದ್ಧಿಗೆ ಸರ್ಕಾರ ಬದ್ಧ

▶▶ ಮೊದಲನೇ ಪುಟದಿಂದ

ಹಣ ನೀಡಿ ಅಭಿವೃದ್ಧಿಗೆ ಕ್ರಮ ಕೈಗೊಂಡಿದ್ದು, ಇದರ ಬಳಿಕ ಈ ತಾಲೂಕುಗಳಲ್ಲಿ ಅಭಿವೃದ್ಧಿಯಾಗಿವೆಯೇ ಇಲ್ಲವೆ ಎಂಬುದರ ಬಗ್ಗೆ ಮಾಹಿತಿ ಪಡೆಯುವುದು ಅಗತ್ಯವಿದೆ ಎಂದು ತೀರ್ಮಾನಿಸಿ ಉತ್ತರ ಕರ್ನಾಟಕದವರೇ ಆದ ಹಿರಿಯ ಆರ್ಥಿಕ ತಜ್ಞ ಪ್ರೊ. ಗೋವಿಂದರಾವ್ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿದ್ದೇವೆ. ಜನವರಿ ತಿಂಗಳ ಅಂತ್ಯದೊಳಗೆ ಈ ಸಮಿತಿಯು ವರದಿ ಸಲ್ಲಿಸುವ ನಿರೀಕ್ಷೆ ಇದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.



# ಜಮ್ಮು-ಕಾಶ್ಮೀರ: ಪತ್ರಕರ್ತನ ಮೊಬೈಲ್ ಫೋನ್ ವಶಪಡಿಸಿಕೊಂಡ ಪೊಲೀಸರು

■ ವಿಜಯಸಾಕ್ಷಿ ಸುದ್ದಿ, ಕಾಶ್ಮೀರ

ಕಿಶ್ವಾರ್‌ನಲ್ಲಿನ ವಿದ್ಯುತ್ ಯೋಜನೆಯಲ್ಲಿ ಸ್ವಜನಪಕ್ಷಪಾತ ಮತ್ತು ಭ್ರಷ್ಟಾಚಾರದ ಆರೋಪಗಳ ಕುರಿತು ವರದಿ ಮಾಡುತ್ತಿದ್ದಾಗ, ದಿ ವೈರ್ ಸುದ್ದಿ ಪೋರ್ಟಲ್‌ನ ಪತ್ರಕರ್ತ ಜೆಹಾಂಗೀರ್ ಅಲಿ ಅವರ ಮೊಬೈಲ್ ಫೋನ್ ಅನ್ನು ಬುಧವಾರ (ಡಿಸೆಂಬರ್ 17) ಜಮ್ಮು ಮತ್ತು ಕಾಶ್ಮೀರ ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು 'ದಿ ವೈರ್' ಆರೋಪಿಸಿದೆ.

"ಕಾಶ್ಮೀರದ ಬದ್ಗಾಮ್ ಜಿಲ್ಲೆಯಲ್ಲಿರುವ ಅಲಿ ಅವರ ನಿವಾಸದಿಂದ ಪೊಲೀಸರು ಫೋನ್ ಅನ್ನು ವಶಪಡಿಸಿಕೊಂಡರು. ಪೊಲೀಸ್ ಕ್ರಮವು ಜಮ್ಮು ಮತ್ತು ಕಾಶ್ಮೀರ ಪೊಲೀಸರು, ಸ್ಥಳೀಯ ಆಡಳಿತವು ನಮ್ಮ ವರದಿಗಾರನನ್ನು ಬೆದರಿಸಲು ಮಾಡಿದ ಪ್ರಯತ್ನವಾಗಿದೆ. ಇದು ರಾಜ್ಯದ ಪತ್ರಕರ್ತರ ಮೇಲೆ ವ್ಯವಸ್ಥಿತ ಕಿರುಕುಳದ ಸಂಕೇತವಾಗಿದೆ" ಎಂದು ದಿ ವೈರ್ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

**ಶೈಕ್ಷಣಿಕ ಸಮಸ್ಯೆಗಳ ಕುರಿತು ಶಿಕ್ಷಣ ಸಚಿವ ಮಧು ಬಂಗಾರಪ್ಪರಿಗೆ ಮನವಿ**

# ಶಿಕ್ಷಕರ, ಶಿಕ್ಷಣ ಸಂಸ್ಥೆಗಳ ಸಮಸ್ಯೆಗಳಿಗೆ ಸ್ಪಂದಿಸುವೆ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಶಿಕ್ಷಣ ಸಚಿವನಾಗಿ ಎರಡುವರೆ ವರ್ಷದಲ್ಲಿ ಶಿಕ್ಷಕರ ಹಾಗೂ ಶೈಕ್ಷಣಿಕ ಸಂಸ್ಥೆಗಳ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸಿ ಹಲವಾರು ಜ್ವಲಂತ ಸಮಸ್ಯೆಗಳಿಗೆ ಪರಿಹಾರಗಳನ್ನ ಕೈಗೊಂಡಿದ್ದೇನೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.

ಅವರು ಮುಂಡರಗಿಯ ಜಗದ್ಗುರು ಅನ್ನದಾನೇಶ್ವರ ವಿದ್ಯಾ ಸಮಿತಿಯ ಶತಮಾನೋತ್ಸವ ಸಂಭ್ರಮ ಕಾರ್ಯಕ್ರಮದ ಪದಾಧಿಕಾರಿಗಳು ಶೈಕ್ಷಣಿಕ ಸಮಸ್ಯೆಗಳ ಕುರಿತು ಬೆಳಗಾವಿಯ ಸುವರ್ಣಸೌಧದಲ್ಲಿ ಸಲ್ಲಿಸಿದ ಮನವಿ ಹಾಗೂ ಶತಮಾನೋತ್ಸವ ಕಾರ್ಯಕ್ರಮಕ್ಕೆ ಆಗಮಿಸುವ ಕುರಿತು ನೀಡಿದ ಆಮಂತ್ರಣ ಪತ್ರಿಕೆ ಸ್ವೀಕರಿಸಿ ಮಾತನಾಡಿದರು.

ಶೈಕ್ಷಣಿಕ ಕ್ಷೇತ್ರದಲ್ಲಿ ಈಗಾಗಲೇ ಹಲವಾರು ಸಮಸ್ಯೆಗಳಿಗೆ ಪರಿಹಾರ ಒದಗಿಸಿದ್ದೇವೆ. ಒಂದು ಸಮಸ್ಯೆಗೆ ಪರಿಹಾರ ಹುಡುಕುವುದರೊಳಗಾಗಿ ಮತ್ತೆರಡು ಸಮಸ್ಯೆಗಳು ಹುಟ್ಟಿಕೊಳ್ಳುವುದು ಶಿಕ್ಷಣ ಕ್ಷೇತ್ರದಲ್ಲಿ ಸಾಮಾನ್ಯವಾಗಿದೆ. ಹೀಗಾಗಿ ದಿನದ 24 ತಾಸು ಕೆಲಸ ಮಾಡಿದರೂ ಕಡಿಮೆಯೇ. ಖಾಸಗಿ ಶಿಕ್ಷಣ ಸಂಸ್ಥೆಗಳ ನೋಂದಣಿ ನವೀಕರಣ, ಖಾಲಿ ಹುದ್ದೆಗಳ ನೇಮಕ, ಹಳೆ ಪಿಂಚಣಿ ಪದ್ಧತಿಯನ್ನು ಮುಂದುವರಿಸುವುದು, ಅನುದಾನ ರಹಿತ ಕನ್ನಡ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವುದು ಸೇರಿದಂತೆ ಹಲವಾರು ಸಮಸ್ಯೆಗಳು ನಮ್ಮ ಮುಂದಿವೆ. ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಈಗಾಗಲೇ ಸಾಕಷ್ಟು ಸಿದ್ಧತೆಗಳನ್ನ ಮಾಡಿಕೊಂಡಿದ್ದೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಶತಮಾನೋತ್ಸವ ಸಮಿತಿಯ ಗೌರವಾಧ್ಯಕ್ಷರು ಹಾಗೂ ಶಿರಹಟ್ಟಿ ಮತಕ್ಷೇತ್ರದ ಶಾಸಕರಾದ ಡಾ. ಚಂದ್ರು ಲಮಾಣಿ, ಡಾ. ಬಸವರಾಜ್ ಧಾರವಾಡ, ಅನ್ನದಾನೇಶ್ವರ ವಿದ್ಯಾ ಸಮಿತಿಯ ಆಡಳಿತಾಧಿಕಾರಿ ಡಾ. ಬಿ.ಜಿ. ಜವಳಿ, ಎಂ.ಎಸ್. ಡಂಬಳ ಬಾಲಕಿಯರ ಪ್ರೌಢಶಾಲೆಯ ಚೇರಮನ್ ಎಂ.ಎಸ್. ಶಿವಶೆಟ್ಟಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಉತ್ತರ ಕರ್ನಾಟಕ ಪತ್ರಿಕೆಯ ಸಂಪಾದಕ ಅವಿನಾಶ್ ಸಾಲ್ಮನಿ ಮುಂತಾದವರು ಉಪಸ್ಥಿತರಿದ್ದರು.

ಸರಕಾರಿ ಶಾಲೆಗಳಲ್ಲಿ ಸಿಗುವ ಎಲ್ಲ ಸೌಲಭ್ಯಗಳನ್ನು ಖಾಸಗಿ ಶಾಲೆಗಳ ಶಿಕ್ಷಕರಿಗೆ ಹಾಗೂ ಮಕ್ಕಳಿಗೂ ಸಿಗುವಂತೆ ನೋಡಿಕೊಳ್ಳುವುದು ನನ್ನ ಪ್ರಮುಖ ಜವಾಬ್ದಾರಿಯಾಗಿದೆ. ಮುಂಡರಗಿಯ ಜಗದ್ಗುರು ಅನ್ನದಾನೇಶ್ವರ ವಿದ್ಯಾ ಸಮಿತಿ ತನ್ನ ಶತಮಾನೋತ್ಸವವನ್ನು ಆಚರಿಸಿಕೊಳ್ಳುತ್ತಿರುವ ಸಂಗತಿ ಖುಷಿ ತಂದಿದೆ. ಒಂದು ಜವಾಬ್ದಾರಿಯುತ ಸರಕಾರ ಮಾಡುವ ಕೆಲಸವನ್ನು ಮಠ-ಮಾನ್ಯಗಳು ಮಾಡುವ ಮೂಲಕ ಸಾಮಾಜಿಕ ಹೊಣೆಗಾರಿಕೆಯನ್ನು ನಿಭಾಯಿಸಿದ್ದು ಹೆಮ್ಮೆಯ ಸಂಗತಿ. ಹೀಗಾಗಿ ಶ್ರೀಮಠಕ್ಕೆ ಸರಕಾರ ಸದಾಕಾಲ ಚಿರಋಣಿಯಾಗಿದೆ. ಶ್ರೀಗಳ ನಿರಂತರ ಪರಿಶ್ರಮದಿಂದಾಗಿ ಲಕ್ಷಾಂತರ ಮಕ್ಕಳಿಗೆ ಅನ್ನದಾನ, ಅಕ್ಷರ ದಾಸೋಹದ ಮೂಲಕ ಅಕ್ಷರದ ಹಸಿವನ್ನು ಇಂಗಿಸಿದ ವಿದ್ಯಾ ಸಮಿತಿಯ ಶತಮಾನೋತ್ಸವದ ಸಂಭ್ರಮದ ಕಾರ್ಯಕ್ರಮದಲ್ಲಿ ಅತ್ಯಂತ ಖುಷಿಯಿಂದ ಭಾಗವಹಿಸುವದಾಗಿ ಸಚಿವರು ಹೇಳಿದರು.

# ಚರಗ ಚೆಲ್ಲಿ ಸಂಭ್ರಮಿಸಿದ ರೈತರು



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಉತ್ತರ ಕರ್ನಾಟಕದ ರೈತರ ಪ್ರಮುಖ ಹಬ್ಬಗಳಲ್ಲಿ ಒಂದಾದ ಎಳ್ಳ ಅಮವಾಸ್ಯೆಯನ್ನು ವಿಶೇಷವಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಪ್ರಸಕ್ತ ವರ್ಷ ಶುಕ್ರವಾರ ಎಳ್ಳ ಅಮವಾಸ್ಯೆಯನ್ನು ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಸಡಗರ ಸಂಭ್ರಮದಿಂದ ಆಚರಿಸಿದರು.

ನರೇಗಲ್ಲ, ಕೋಡಿಕೊಪ್ಪ, ಕೋಚಲಾಪೂರ, ತೋಟಗಂಟಿ, ಮಲ್ಲಾಪೂರ, ದ್ಯಾಂಪೂರ, ಜಕ್ಕಲಿ, ಬೂದಿಹಾಳ, ಮಾರನಬಸರಿ, ಕಳಕಾಪೂರ, ಹೊಸಳ್ಳಿ, ನಿಡಗುಂದಿ, ನಿಡಗುಂದಿಕೊಪ್ಪ, ಹಾಲಕೆರೆ ಸೇರಿದಂತೆ ಹೋಬಳಿಯಾದ್ಯಂತ ಶುಕ್ರವಾರ ಭೂತಾಯಿಗೆ ಚರಗ ಚೆಲ್ಲುವ ಮೂಲಕ ರೈತರು ಭೂತಾಯಿಯನ್ನು ಪೂಜಿಸಿದರು.

ಹೊಲದಲ್ಲಿ ಬೆಳೆದ ಹಿಂಗಾರು ಪೈರುಗಳ ನಡುವೆ ಬನ್ನಿಮರವನ್ನು ಹುಡುಕಿ ಅದಕ್ಕೆ ಪೂಜೆ ಮಾಡಿ ಭೂಮಿತಾಯಿಗೆ ಚರಗ ಚೆಲ್ಲುವುದು ಈ ಹಬ್ಬದ ವಿಶೇಷವಾಗಿದೆ. ಭೂಮಿ ತಾಯಿಗೆ ಪೂಜೆ ಮಾಡಿ ಮನೆಗಳಿಂದ ತೆಗೆದುಕೊಂಡು ಹೋದ ಆಹಾರವನ್ನು ಇಡೀ ಹೊಲದ ತುಂಬೆಲ್ಲ ಚೆಲ್ಲುವು ದೃಶ್ಯ ಸಾಮಾನ್ಯವಾಗಿತ್ತು.

ಈಹಿಂದೆ ಸಾವಿರಾರೂ ಎತ್ತು ಬಂಡಿಗಳಲ್ಲಿ ರೈತಾಪಿ ವರ್ಗ ಹೊಲಗಳಿಗೆ ಚರಗ ಚೆಲ್ಲಲು ಹೋಗುತ್ತಿದ್ದರು. ಆದರೆ, ಈಗ ಟ್ರ್ಯಾಕ್ಟರ್‌ಗಳ ಹಾವಳಿಯಿಂದಾಗಿ ಬೆರಳೆಣಿಕೆಯಷ್ಟು ಮಾತ್ರ ಚಕ್ಕಡಿಗಳು ಕಂಡುಬಂದವು. ಈ ಚರಗ ಚೆಲ್ಲುವ ಪದ್ಧತಿ ಪುರಾತನ ಕಾಲದ್ದಾದರೂ ವೈಜ್ಞಾನಿಕ ಹಿನ್ನೆಲೆಯನ್ನೂ ಹೊಂದಿದೆ.

ಪುರಾತನ ಕಾಲದಿಂದ ಗ್ರಾಮೀಣ ಜನರು ಕೃಷಿಗೆ ಸಂಬಂಧಿಸಿದಂತೆ ಆಚರಿಸಿಕೊಂಡು ಬಂದಿರುವ ಹಬ್ಬ-ಹರಿದಿನಗಳು ಅತ್ಯಂತ ವೈಜ್ಞಾನಿಕವಾಗಿದೆ. ಅವುಗಳನ್ನು ಮುಂದುವರಿಸಿಕೊಂಡು ಹೋಗಬೇಕಾದ ಅಗತ್ಯವೂ ಇದೆ ಎಂದು ಕೋಟುಮಚಗಿಯ ಸಾವಯವ ಕೃಷಿಕ ವೀರೇಶ ನೇಗಲಿ ಅಭಿಪ್ರಾಯಪಟ್ಟರು.

## ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಅಹ್ವಾನ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣ ಪಂಚಾಯತಿಯ ವತಿಯಿಂದ 2023–24ನೇ ಸಾಲಿನ 24.10%, ಎಸ್.ಎಫ್.ಸಿ ಅನುದಾನದಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ನೀಡಲು ಅರ್ಜಿಯನ್ನು ಅಹ್ವಾನಿಸಲಾಗಿದೆ. ಸರ್ಕಾರದ ಸುತ್ತೋಲೆಯಂತೆ ನರೇಗಲ್ಲ ಪಟ್ಟಣದ ಖಾಯಂ ರಹವಾಸಿಯಾಗಿರಬೇಕು. ದಿನಾಂಕ:29–12–2025 ರ ಸಾಯಂಕಾಲ 5–00 ಗಂಟೆ ಒಳಗಾಗಿ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ನರೇಗಲ್ಲ ಇವರಿಗೆ ಅರ್ಜಿಗಳನ್ನು ಸಲ್ಲಿಸಬೇಕು. ಅಪೂರ್ಣ ಹಾಗೂ ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವದಿಲ್ಲ. ಕಚೇರಿ ವೇಳೆಯಲ್ಲಿ ರಜೆ ದಿನಗಳನ್ನು ಹೊರತುಪಡಿಸಿ ಸಂಬಂಧಿಸಿದ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದು ಹಾಗೂ ಈಗಾಗಲೇ ಸೌಲಭ್ಯವನ್ನು ಪಡೆದಂತಹ ಫಲಾನುಭವಿಗಳು ಅರ್ಹರಿರುವುದಿಲ್ಲಾ ಎಂದು ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.23ರಂದು ಪಿಂಚಣಿ ಅದಾಲತ್

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಭಾಗದ ಮಟ್ಟದ ಪಿಂಚಣಿ ಅದಾಲತ್‌ನ್ನು ಡಿಸೆಂಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಅಂಚೆ ಇಲಾಖೆಯ ಗದಗ ವಿಭಾಗೀಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂಚೆ ಪಿಂಚಣಿದಾರರ ಕುಂದುಕೊರತೆಗಳನ್ನು ಮಾತ್ರ ಪರಿಗಣಿಸಲಾಗುವುದು. ಪಿಂಚಣಿದಾರರು ತಮ್ಮ ಕುಂದುಕೊರತೆಗಳನ್ನು ಮೇಲ್ ವಿಳಾಸ dogadag.ka@indiapost.gov.in ಕ್ಕೆ ಕುಂದು ಕೊರತೆಗಳನ್ನು ಡಿಸೆಂಬರ್ 22 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ವಿಭಾಗೀಯ ಅಂಚೆ ಕಚೇರಿಯ ಅಧೀಕ್ಷಕರ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಉಚಿತ ಬಿತ್ತನೆ ಬೀಜಕ್ಕೆ 1 ಸಾವಿರ ರೂ ಪಡೆದು ಭ್ರಷ್ಟಾಚಾರವೆಸಗಿದರೇ ಅಧಿಕಾರಿಗಳು?

# ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದ ರೈತ ಸಂಪರ್ಕ ಕೇಂದ್ರದಲ್ಲಿ ಉಚಿತವಾಗಿ ವಿತರಿಸಬೇಕಿದ್ದ ಶೇಂಗಾ ಬಿತ್ತನೆ ಬೀಜವನ್ನು ಡಂಬಳ ಹೋಬಳಿಯ ರೈತರಿಗೆ ಸೂಕ್ತ ಮಾಹಿತಿ, ಪ್ರಕಟಣೆಯನ್ನು ನೀಡದೆ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ನಿಜವಾದ ರೈತರಿಗೆ ವಿತರಿಸದೆ, ಗ್ರಾಮದ ಕೆಲ ಶ್ರೀಮಂತ ರೈತರಿಗೆ, ತಮಗೆ ಬೇಕಾದವರಿಗೆ ಮಾತ್ರ ಎಪಿಎಂಸಿಯಲ್ಲಿ ನೀಡಲಾಗಿದೆ ಮತ್ತು ಯಾವುದೇ ಆದೇಶ ಇಲ್ಲದಿದ್ದರೂ ರೈತರಿಗೆ ಬಿಲ್ ಕೂಡಾ ನೀಡದೆ ಸಾವಿರ ರೂಗಳನ್ನು ಪಡೆದುಕೊಂಡು ಅಧಿಕಾರಿಗಳು ಭ್ರಷ್ಟಾಚಾರ ಮಾಡಿದ್ದಾರೆ. ಇದರ ಬಗ್ಗೆ ಸೂಕ್ತ ವಿಚಾರಣೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಎಂದು ರೈತರು ಕೃಷಿ ಅಧಿಕಾರಿ ಎಸ್.ಬಿ. ರಾಮೇನಳ್ಳಿ ಅವರಿಗೆ ಮನವಿ ಸಲ್ಲಿಸಿದರು.



ಯಾವುದೇ ಆದೇಶ ಇಲ್ಲದೆ ಇದ್ದರು ಕೂಡಾ ಲಿಂಕ್ ಎಂದು ಹೇಳಿ 1 ಸಾವಿರ ರೂ ಪಡೆದು ಚಿಂಕ್, ಬೋರ್ಯಾಕ್ಸ್, ಟಾನಿಕ್, ಟ್ರೇಕೊಡರ್ಮಾ, ವಿಮಾಮಿಟ್, ಬಿಂಜಾಯಿಟ್ ವಿತರಿಸಿ, ಬಿಲ್ ಕೂಡ ನೀಡದೆ ರೈತರಿಂದ ಹೆಚ್ಚು ಹಣವನ್ನು ಪಡೆದುಕೊಂಡಿದ್ದು, ಹಾಡ ಹಗಲೇ ರೈತರನ್ನು ಲೂಟಿ ಮಾಡಿದ್ದಾರೆ. ಕಡಿಮೆ ಹಿಡುವಳಿ ಇರುವ ರೈತರಿಗೆ 60 ಕೆಜಿ ಕೊಡಬೇಕು. ಆದರೆ, ಇದು ವಿತರಣೆಯಾಗಿಲ್ಲ. ಇದರ ಕುರಿತು ಸೂಕ್ತ ತನಿಖೆಯನ್ನು ಮಾಡಬೇಕು. ಹಿರಿಯ ಅಧಿಕಾರಿಗಳು ತನಿಖೆಗೆ ಮುಂದಾಗಿ ರೈತರಿಗೆ ನ್ಯಾಯ ದೊರಕಿಸಿಕೊಡದಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯೆದುರು ಪ್ರತಿಭಟನೆಯನ್ನು ಹಮ್ಮಿಕೊಳ್ಳುತ್ತೇವೆ ಎಂದು ರೈತರಾದ ಪ್ರಕಾಶ ಮೇಗೂರ, ಪುಂಡಲೀಕ ಪಾರಪ್ಪನವರ, ಆದಿತ್ಯ ಗದಗಿನ, ಮಲ್ಲಪ್ಪ ಹರಿಜನ, ವಿ.ಆರ್. ಗದಗಿನ, ಬಿ.ಎಸ್. ಮೇಗೇರಿ, ಬಿ.ವಾಯ್. ಯಲಭೋವಿ, ಎಸ್.ಎಮ್. ವಲ್ಲೇನ್ನವರ, ಸೋಯಲ್ ತಾಂಬೋಟಿ, ಬುಡ್ನೆಸಾಬ ಜಲಾಲನವರ, ಶ್ರೀಧರ ಪಲ್ಲೇದ, ಎ.ಎಮ್. ತಾಂಬೋಟಿ, ಭರಮಪ್ಪ ಮಂಗೋಜಿ, ಶ್ರೀಕಾಂತ ಶಿರಿಗೇರಿ ಮುಂತಾದ ರೈತರು ಮನವಿ ಸಲ್ಲಿಸಿದರು. ತಾಲೂಕಾಧಿಕಾರಿಗಳ ಮೌಖಿಕ ಸೂಚನೆಯ ಮೇರೆಗೆ ಉಚಿತ ಶೇಂಗಾ ಬಿತ್ತನೆ ಬೀಜವನ್ನು ರೈತರಿಗೆ ನೀಡಲಾಗಿದ್ದು, ಆಧಾರ್ ಕಾರ್ಡ್ ಸೇರಿದಂತೆ ದಾಖಲೆಗಳನ್ನು ಪಡೆಯಲಾಗಿದೆ. ಇದರಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ ಎಂದು ಡಂಬಳ ರೈತ ಸಂಪರ್ಕ ಅಧಿಕಾರಿ ಎಸ್.ಬಿ. ರಾಮೇನಹಳ್ಳಿ ರೈತರಿಗೆ ವಿವರಿಸಿದರು.

> ಡಂಬಳ ರೈತ ಸಂಪರ್ಕ ಕೇಂದ್ರದಿಂದ ರೈತರಿಗೆ ಉಚಿತ ಶೇಂಗಾ ಬಿತ್ತನೆ ಬೀಜವನ್ನು ನೀಡಿದ್ದು, 1 ಸಾವಿರ ರೂ ಬೀಜೋಪಚಾರದ ಔಷಧಕ್ಕಾಗಿ ಪಡೆಯಲಾಗಿದೆ. ಇದರಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ.
>
> **– ಪ್ರಾಣೇಶ ಮುಂಡರಗಿ.**
> ತಾಲೂಕಾ ಕೃಷಿ ಅಧಿಕಾರಿ.

> ಡಂಬಳ ಹೋಬಳಿಯ ಯಾವುದೇ ರೈತರಿಗೆ ಈ ಬಗ್ಗೆ ಸೂಕ್ತ ಮಾಹಿತಿ ತಿಳಿಸಿಲ್ಲ. ನಿಜವಾದ ಫಲಾನುಭವಿಗಳಿಗೆ ಬೀಜ ವಿತರಣೆಯಾಗಿಲ್ಲ. ಸರಕಾರದಿಂದ ಆದೇಶ ಇರದಿದ್ದರೂ ಕೂಡಾ ಬಿಲ್ ನೀಡದೇ ಹಣ ಪಡೆಯಲಾಗಿದೆ ಮತ್ತು ಕಡಿಮೆ ಹಿಡುವಳಿಯ ಕಡು ಬಡವ ರೈತರಿಗೆ ಮಾನ್ಯತೆ ನೀಡದೆ ಎಲ್ಲ ನಿಯಮಗಳನ್ನು ಗಾಳಿಗೆ ತೂರಿ ರಾತೋರಾತ್ರಿ ಉಚಿತ ಬೀಜ ನೀಡಿದ್ದು ಬಹುತೇಕ ಶ್ರೀಮಂತರ ಕೈಸೇರಿದೆ. ಇದರ ಕುರಿತು ಸೂಕ್ತ ತನಿಖೆ ನಡೆಸಬೇಕು.
>
> **– ಆದಿತ್ಯ ಗದಗಿನ.**
> ಡಂಬಳ ಗ್ರಾಮದ ಯುವ ರೈತ.

## ಜಾತ್ರಾ ಮಹೋತ್ಸವದ ಷಟಸ್ಥಲ ಧ್ವಜಾರೋಹಣ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಷಟಸ್ಥಲ ತತ್ವಗಳನ್ನು ಅಳವಡಿಸಿಕೊಳ್ಳಬೇಕು. ಅದರಿಂದ ಮಾತ್ರ ಭವ ಬಂಧನದಿಂದ ಮುಕ್ತಿಹೊಂದಲು ಸಾಧ್ಯ ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಚನ್ನಬಸವ ಸ್ವಾಮೀಜಿ ಹೇಳಿದರು.

ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ 175ನೇ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಷಟಸ್ಥಲ ಧ್ವಜಾರೋಹಣ ನೆರವೇರಿಸಿ ಅವರು ಆಶೀರ್ವಚನ ನೀಡಿದರು.

ಮಾನವ ಜನ್ಮವೇ ದೊಡ್ಡ ಸಂಪತ್ತು. ಷಟಸ್ಥಲದ 6 ನಿಯಮಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಡೆದರೆ ಜೀವನ ಪಾವನವಾಗುತ್ತದೆ. ಶಿವನ ಆರು ಸ್ಥಲಗಳನ್ನು ಪ್ರತಿನಿಧಿಸುವ ಧ್ವಜವನ್ನು ಎತ್ತರಕ್ಕೆ ಹಾರಿಸುವ ಕಾರ್ಯಕ್ರಮವೇ ಷಟಸ್ಥಲ ಧ್ವಜಾರೋಹಣವಾಗಿದೆ. ಇದು ಧಾರ್ಮಿಕ ಉತ್ಸವಗಳಲ್ಲಿ, ಪೀಠಗಳ ಮಹೋತ್ಸವಗಳಲ್ಲಿ, ಅಥವಾ ವೀರಶೈವ ಸಮಾಜದ ಕಾರ್ಯಕ್ರಮಗಳಲ್ಲಿ ನಡೆಯುತ್ತದೆ. ಇದು ಭಕ್ತಿ, ಶರಣ ಸಂಸ್ಕೃತಿ ಮತ್ತು ಶಿವನ ತತ್ವಗಳ ಪಾವಿತ್ರತೆಯನ್ನು ಸಾರುತ್ತದೆ. ಹಾಲಕೆರೆಯ ಶ್ರೀಪೀಠದ ಎಲ್ಲ ಗುರುಗಳು ಷಟಸ್ಥಲ ಮಾರ್ಗವನ್ನು ಅನುಸರಿಸಿ ಎಲ್ಲ ಭಕ್ತರನ್ನು ಸಮಾನವಾಗಿ ಕಂಡು ಅವರ ಉದ್ಧಾರಕ್ಕೆ ಕಾರಣವಾದರು, ಜನ ಮಾನಸದಲ್ಲಿ ಶಾಶ್ವತವಾಗಿ ಉಳಿದರು. ಅದೇ ಮಾರ್ಗದಲ್ಲಿ ನಾವು ನಡೆದುಕೊಂಡು ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು. ಇಂದಿನ ಪೀಠಾಧಿಪತಿಗಳಾದ ಮುಪ್ಪಿನ ಬಸವಲಿಂಗ ಸ್ವಾಮೀಜಿಗಳು ಶ್ರೀಮಠದಲ್ಲಿ ಆಧ್ಯಾತ್ಮದ ಚಿಂತನೆ ಸದಾ ಕಾಲ ಉಳಿಯುವಂತೆ ಚಟುವಟಿಕೆಗಳನ್ನು ಹಮ್ಮಿಕೊಂಡಿದ್ದಾರೆ ಎಂದರು.



ಮರಿಕೊಟ್ಟೂರ ದೇಶಿಕರು, ಗ್ರಾ.ಪಂ ಅಧ್ಯಕ್ಷ ಗಿರಿಯಪ್ಪಗೌಡ ಮುಲ್ಕಿಪಾಟೀಲ, ಉಪಾಧ್ಯಕ್ಷ ಬಾಳಪ್ಪ ತಲೇಖಾನ, ವೀರಣ್ಣ ಹಳ್ಳಿ, ಬಸವರಾಜ ಮೇಟಿ ಸೇರಿದಂತೆ ಇತರರಿದ್ದರು.

## ಸುರಕ್ಷತಾ ಕ್ರಮಗಳನ್ನು ಅಳವಡಿಸಲು ಒತ್ತಾಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಶಿಗ್ಲಿ– ದೊಡ್ಡೂರ ರಸ್ತೆಯ ನಡುವೆ ಬುಧವಾರ ಖಾಸಗಿ ಶಾಲೆಯ ನಾಲ್ಕು ವರ್ಷದ ಪುಟ್ಟ ಕಂದನ ಸಾವು ಪಾಲಕರಲ್ಲಿ ಭಯ ಮೂಡಿಸಿದೆ. ಇದರಿಂದ ಖಾಸಗಿ ಶಾಲಾ ವಾಹನಗಳಲ್ಲಿ ಸಂಚರಿಸುವ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಖಾಸಗಿ ಶಾಲಾ ವಾಹನಗಳಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿ ಪಾಲಕರು ಹಾಗೂ ಶಿಕ್ಷಣ ಪ್ರೇಮಿಗಳು ಶುಕ್ರವಾರ ಬೆಳಿಗ್ಗೆ ಸೂರಣಗಿ ಗ್ರಾಮದಲ್ಲಿ ಬಸ್ ತಡೆದು ವಿನಂತಿ ಅರ್ಜಿ ಸಲ್ಲಿಸಿದರು.

ಬುಧವಾರ ಶಾಲಾ ಬಸ್‌ನಿಂದ ಬಿದ್ದ ಮಗು ಸಾವನಪ್ಪಿರುವದು ಕುಟುಂಬಕ್ಕೆ ಜೀವನಪರ್ಯಂತ ಮರೆಯಲಾರದ ಆಘಾತವಾಗಿದೆ. ಇಂತಹ ದುರ್ಘಟನೆಗಳು ಮರುಕಳಿಸದಂತೆ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ವಿಶೇಷ ಕಾಳಜಿ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.



ಎಲ್ಲ ಶಾಲಾ ಸಂಸ್ಥೆಗಳು ನಡೆಸುವ ವಾಹನಗಳ ವಿಮೆ ಚಾಲ್ತಿಯಲ್ಲಿರುವದು, ವಾಹನದ ಪರವಾನಿಗೆ (ಪರ್ಮಿಟ್) ಹೊಂದಿರಬೇಕು, ಚಾಲಕ ಮತ್ತು ನಿರ್ವಾಹಕ ಶಾಲಾ ಗುರುತಿನ ಚೀಟಿ (ಐಡಿ ಕಾರ್ಡ್) ಹೊಂದಿರಬೇಕು, ವಾಹನದ ಒಳಗಡೆ ಸಿಸಿ ಕ್ಯಾಮರಾ ಅಳವಡಿಸಿರುವದು, ಮಿತಿಗಿಂತ ಹೆಚ್ಚಿನ ಮಕ್ಕಳನ್ನು ಬಸ್‌ನಲ್ಲಿ ತುಂಬುವದನ್ನು ತಡೆಗಟ್ಟಬೇಕು. ಸದರಿ ಕ್ರಮಗಳನ್ನು ಮುಂದಿನ ಸೋಮವಾರದ ಒಳಗಾಗಿ ಅಳವಡಿಸಿಕೊಳ್ಳಡಿದ್ದರೆ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಈ ವೇಳೆ ಹನುಮಂತ ಪೂಜಾರ, ಚಂದ್ರಶೇಖರ ಶೀರನಹಳ್ಳಿ, ಬಸವರಾಜ ದುರ್ಗದ, ಗಂಗಾಧರಯ್ಯ ಹಿರೇಮಠ, ಪ್ರವೀಣ ಸೂರಣಗಿ, ಬಸವರಾಜ ಬೆನಕನಹಳ್ಳಿ, ನವೀನ ಗೊಲ್ಲರ, ಸೋಮು ಬೆಟಗೇರಿ, ಪುಟ್ಟಯ್ಯ ಮಠಪತಿ, ಈರಣ್ಣ ಶೀರನಹಳ್ಳಿ, ಷಣ್ಮುಖ ಸೂರಣಗಿ, ಮಹೇಶ ಮೂಲಿಮನಿ, ಹನುಮಂತ ಪೂಜಾರ, ಮಲ್ಲೇಶಪ್ಪ ಕಳ್ಳಿಹಾಳ, ಬಸವರಾಜ ಮಡಿವಾಳರ, ಶಂಭಣ್ಣ ಸಂಕ್ಲೀಪುರ, ಮಲ್ಲಿಕಾರ್ಜುನ ಇಟಗಿ, ನಾಗಪ್ಪ ಜಾಡರ, ಉದಯ ಕಳ್ಳಿಹಾಳ, ಅಂಬರೀಶ ಬೆನಕನಹಳ್ಳಿ, ಪವನ ಅರಳಿ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

## ಶತಮಾನೋತ್ಸವದಲ್ಲಿ ಹೆಮ್ಮೆಯಿಂದ ಭಾಗವಹಿಸುವೆ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿಯ ಶ್ರೀ ಜಗದ್ಗುರು ಅನ್ನದಾನೇಶ್ವರ ವಿದ್ಯಾ ಸಮಿತಿ 101 ವರ್ಷಗಳನ್ನು ಪೂರೈಸಿ ತನ್ನ ಶತಮಾನೋತ್ಸವ ಸಮಾರಂಭವನ್ನು ಅರ್ಥಪೂರ್ಣವಾಗಿ ಆಚರಿಸಿಕೊಳ್ಳುತ್ತಿರುವುದು ಅತ್ಯಂತ ಸಂತಸ ತಂದಿದೆ. ಕಾರ್ಯಕ್ರಮದಲ್ಲಿ ಅತ್ಯಂತ ಅಭಿಮಾನದಿಂದ ಭಾಗವಹಿಸುವುದಾಗಿ ಸಭಾಪತಿ ಬಸವರಾಜ್ ಹೊರಟ್ಟಿ ಹೇಳಿದರು.

ಶತಮಾನೋತ್ಸವ ಸಮಿತಿಯ ಪದಾಧಿಕಾರಿಗಳಿಂದ ಆಮಂತ್ರಣ ಸ್ವೀಕರಿಸಿ ಮಾತನಾಡಿದ ಅವರು, ಅನ್ನದಾನೇಶ್ವರ ವಿದ್ಯಾ ಸಮಿತಿ ವಿಶೇಷವಾಗಿ ಗ್ರಾಮೀಣ ವಿದ್ಯಾರ್ಥಿಗಳನ್ನು ಕೇಂದ್ರೀಕೃತವಾಗಿಟ್ಟುಕೊಂಡು ಅಕ್ಷರ ದಾಸೋಹ, ಅನ್ನದಾಸೋಹ ಮಾಡುವ ಮೂಲಕ ಸರಕಾರ ಮಾಡದೆ ಇರುವ ಕೆಲಸವನ್ನು ಮಾಡುತ್ತಾ ಬಂದಿದೆ. ಹೀಗಾಗಿ ಇದು ಉತ್ತರ ಕರ್ನಾಟಕದ ಹೆಮ್ಮೆಯ ವಿದ್ಯಾ ಸಮಿತಿಯಾಗಿದೆ ಎಂದು ಹೇಳಿದರು.



ಶ್ರೀಗಳು ನೂರಾರು ಪುಸ್ತಕಗಳನ್ನ ಬರೆಯುವ ಮೂಲಕ ಶ್ರೇಷ್ಠ, ಪೂಜ್ಯ ಸಾಹಿತಿಗಳಾಗಿದ್ದಾರೆ. ಇದರ ಜೊತೆಗೆ ಧಾರ್ಮಿಕ ಹಾಗೂ ವಿವಿಧ ಸಮಾಜಮುಖಿ ಸಂಘಟನೆಗಳಿಗೆ ಆರ್ಥಿಕ ನೆರವು, ಭೂಮಿ ದಾನ ಮಾಡುವ ಮೂಲಕ ಅವರೆಲ್ಲ ಕೆಲಸಗಳಿಗೆ ಸಹಕಾರ ನೀಡುತ್ತ ಬಂದಿರುವುದು ವಿಶೇಷವಾಗಿದೆ. ಶ್ರೀ ಮಠ ಬೇಡುವ ಮಠವಾಗದೆ ಕೊಡುವ ಮಠವಾಗಿದ್ದು ವಿಶೇಷ. ಯಾವುದೇ ಫಲಾಪೇಕ್ಷೆ ಇಲ್ಲದೆ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಈ ಸಂಸ್ಥೆಯ ಕಾರ್ಯ ಇತರ ಸಂಸ್ಥೆಗಳಿಗೆ ಮಾದರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶತಮಾನೋತ್ಸವ ಸಂಭ್ರಮ ಸಮಿತಿಯ ಗೌರವಾಧ್ಯಕ್ಷರು ಹಾಗೂ ಶಿರಹಟ್ಟಿ ಮತಕ್ಷೇತ್ರದ ಶಾಸಕರಾದ ಡಾ. ಚಂದ್ರು ಲಮಾಣಿ, ಡಾ. ಬಸವರಾಜ ಧಾರವಾಡ, ಸಂಸ್ಥೆಯ ಆಡಳಿತಾಧಿಕಾರಿ ಡಾ. ಬಿ.ಜಿ. ಜವಳಿ, ಎಂ.ಎಸ್. ಡಂಬಳ, ಬಾಲಕಿಯರ ಪ್ರೌಢಶಾಲೆಯ ಚೇರಮನ್ ಎಂ.ಎಸ್. ಶಿವಶೆಟ್ಟಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಉತ್ತರ ಕರ್ನಾಟಕ ಪತ್ರಿಕೆ ಸಂಪಾದಕ ಅವಿನಾಶ್ ಸಾಲ್ಮನಿ ಮುಂತಾದವರು ಉಪಸ್ಥಿತರಿದ್ದರು.





ಗದುಗಿನ ಅಲಿ ಪಬ್ಲಿಕ್ ಶಾಲೆಯ ಹೊಸ ತರಗತಿ ಕೊಠಡಿಯ ಉದ್ಘಾಟನಾ ಕಾರ್ಯಕ್ರಮ ನೆರವೇರಿತು. ಅಧ್ಯಕ್ಷ ಖ್ವಾಜಾ ಅಮೇರ್, ಕಾರ್ಯದರ್ಶಿ ದಂಡಿನ್, ಟ್ರಸ್ಟಿಗಳಾದ ಮುಫ್ತಿ ಇನಾಯತುಲ್ಲಾ, ಮೌಲಾನಾ ಜಕಾರಿಯಾ, ಅತ್ತರ್, ಆಡಳಿತಾಧಿಕಾರಿ ಸಾದಿಕ್ ಕಾಜಿ, ಜಾಫರ್ ಕಾಜಿ, ಪ್ರಾಂಶುಪಾಲ ಗುಳೇದಗುಡ್ಡ ಸೇರಿದಂತೆ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಡಾ. ಪ್ಯಾರಾಲಿ ನೂರಾನಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು.

## ಹೈನುಗಾರಿಕೆ ಉತ್ತಮ ಆದಾಯದ ಮೂಲ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಬೆಳಗಾವಿ ಅಧಿವೇಶನದಲ್ಲಿ ತಲಾ ಆದಾಯದಲ್ಲಿ ಉತ್ತರ ಕರ್ನಾಟಕ ಭಾಗದ ಹಿಂದುಳಿದಿರುವಿಕೆಯ ಬಗ್ಗೆ ವಿಶ್ಲೇಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, 1985ರಲ್ಲಿ ನಾನು ಹೈನುಗಾರಿಕೆ ಮಂತ್ರಿಯಾಗಿ ಕಾರ್ಯನಿರ್ವಹಿಸಿದ್ದು, ಅಂದಿನಿಂದಲೂ ಉತ್ತರ ಕರ್ನಾಟಕ ಭಾಗದಲ್ಲಿ ಹೈನುಗಾರಿಕೆಗೆ ಆಸಕ್ತಿ ಕಡಿಮೆಯಿದೆ ಎಂದರು.

ಬೆಂಗಳೂರು ಸಹಕಾರಿ ಹಾಲು ಒಕ್ಕೂಟದಲ್ಲಿ ದಿನವೊಂದಕ್ಕೆ 17 ಲಕ್ಷ ಲೀಟರ್ ಹಾಲು ಶೇಖರಣೆಯಾಗುತ್ತದೆ. ಆದರೆ ಕಲಬುರ್ಗಿ, ಯಾದಗಿರಿ, ಬೀದರ್ ರಾಯಚೂರು ಸಹಕಾರಿ ಹಾಲು ಒಕ್ಕೂಟದಲ್ಲಿ ದಿನ ಒಂದಕ್ಕೆ ಕೇವಲ 67 ಸಾವಿರ ಲೀಟರ್ ಹಾಲು ಶೇಖರಣೆಯಾಗುತ್ತದೆ. ರಾಜ್ಯದ ಎಲ್ಲಾ ಸಹಕಾರಿ ಒಕ್ಕೂಟಗಳಲ್ಲಿ ದಿನ ಒಂದಕ್ಕೆ 1 ಕೋಟಿ ಲೀಟರ್ ಹಾಲು ಸಂಗ್ರಹಣೆಯಾದರೆ, ಇದರಲ್ಲಿ ಉತ್ತರ ಕರ್ನಾಟಕ ಭಾಗದ ಸಹಕಾರಿ ಹಾಲು ಒಕ್ಕೂಟಗಳಲ್ಲಿ ಕೇವಲ 10 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತದೆ.



ಹೈನುಗಾರಿಕೆ ಆದಾಯದ ಉತ್ತಮ ಮೂಲವಾಗಿದೆ. ರಾಜ್ಯ ಸರ್ಕಾರವು ಇದಕ್ಕೆ ಪ್ರೋತ್ಸಾಹ ನಿಡುತ್ತಿದ್ದು, ರೈತರಿಗೆ ಪ್ರತಿ ಲೀಟರ್‌ಗೆ ರೂ.7 ಪ್ರೋತ್ಸಾಹ ಧನ ನೀಡುತ್ತಿದೆ. ಇದಕ್ಕಾಗಿ ಪ್ರತಿದಿನ ರೂ.5 ಕೋಟಿ ವೆಚ್ಚವಾಗುತ್ತದೆ. ಉತ್ತರ ಕರ್ನಾಟಕ ಭಾಗದಲ್ಲಿ ಹೈನುಗಾರಿಕೆ ಹೆಚ್ಚಾದರೆ ಜನರ ಆದಾಯವೂ ಹೆಚ್ಚಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಭಿಪ್ರಾಯಪಟ್ಟರು.

## ಕೇರಳದಲ್ಲಿ ಗುಂಪುಹತ್ಯೆ: ಛತ್ತೀಸ್‌ಗಢ ವಲಸೆ ಕಾರ್ಮಿಕನನ್ನು 'ಕಳ್ಳ' ಎಂದು ಥಳಿಸಿ ಕೊಂದ ಗುಂಪು

**■ವಿಜಯಸಾಕ್ಷಿ ಸುದ್ದಿ, ಕೇರಳ**

ಕೇರಳದ ಪಾಲಕ್ಕಾಡ್ ಜಿಲ್ಲೆಯಲ್ಲಿ ಗುರುವಾರ ಛತ್ತೀಸ್‌ಗಢದಿಂದ ಬಂದ ವಲಸೆ ಕಾರ್ಮಿಕನೊಬ್ಬನನ್ನು ಕಳ್ಳನೆಂದು ಶಂಕಿಸಿ ಗುಂಪೊಂದು ಥಳಿಸಿ ಕೊಂದಿದೆ.

ಕೊಲೆಯಾದ ವ್ಯಕ್ತಿಯನ್ನು ರಾಮನಾರಾಯಣ್ ಭಯಾರ್ (31) ಎಂದು ಗುರುತಿಸಲಾಗಿದ್ದು, ಕಳೆದ ಒಂದು ತಿಂಗಳಿನಿಂದ ಪಾಲಕ್ಕಾಡ್‌ನ ಕಾಂಜಿಕೋಡ್‌ನಲ್ಲಿರುವ ಕೈಗಾರಿಕಾ ಎಸ್ಟೇಟ್‌ನಲ್ಲಿ ಕೆಲಸ ಮಾಡುತ್ತಿದ್ದರು. ಘಟನೆಗೆ ಸಂಬಂಧಿಸಿದಂತೆ ಕೊಲೆ ಆರೋಪದ ಮೇಲೆ ವಲಯಾರ್ ಪೊಲೀಸರು ಸ್ಥಳೀಯ ಐದು ಜನರನ್ನು ಬಂಧಿಸಿದ್ದಾರೆ.

ಪೊಲೀಸರ ಪ್ರಕಾರ, ವಲಯಾರ್ ಠಾಣೆ ವ್ಯಾಪ್ತಿಯ ಅಟ್ಟಪಳ್ಳಂ ಗ್ರಾಮದಲ್ಲಿ ಭಯಾರ್ ಎಂಬುವರು ಅಲೆದಾಡುತ್ತಿದ್ದಾಗ ಪತ್ತೆಯಾದ ನಂತರ ಅವರ ಮೇಲೆ ಗ್ಯಾಂಗ್ ಕ್ರೂರವಾಗಿ ಹಲ್ಲೆ ನಡೆಸಿತು."ಅವರು ಮಾನಸಿಕವಾಗಿ ಅಸ್ವಸ್ಥರಾಗಿದ್ದರು ಎಂದು ವರದಿಯಾಗಿದೆ. ಅವರು ಇತರ ವಲಸೆ ಕಾರ್ಮಿಕರೊಂದಿಗೆ ಕೆಲಸ ಮಾಡುತ್ತಿದ್ದ ಕೈಗಾರಿಕಾ ಎಸ್ಟೇಟ್‌ಗೆ ಹೋಗುವ ದಾರಿ ತಪ್ಪಿದರು.

## ವೈದ್ಯೆ ಬುರ್ಖಾ ಎಳೆದ ನಿತೀಶ್‌ಕುಮಾರ್: ಶ್ರೀನಗರದಲ್ಲಿ ದೂರು ದಾಖಲಿಸಿದ ಇಲ್ತಿಜಾ ಮುಫ್ತಿ

**■ವಿಜಯಸಾಕ್ಷಿ ಸುದ್ದಿ, ಶ್ರೀನಗರ**

ಪಾಟ್ನಾದಲ್ಲಿ ನಡೆದ ಸರ್ಕಾರಿ ಕಾರ್ಯಕ್ರಮದ ಸಂದರ್ಭದಲ್ಲಿ ಮುಸ್ಲಿಂ ಮಹಿಳಾ ವೈದ್ಯರ ನಿಖಾಬ್ (ಬುರ್ಖಾ) ಎಳೆಯುತ್ತಿರುವುದನ್ನು ತೋರಿಸುವ ವೈರಲ್ ವೀಡಿಯೊದ ಕುರಿತು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ವಿರುದ್ಧ ಎಫ್‌ಐಆರ್ ದಾಖಲಿಸಲು ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ (ಪಿಡಿಪಿ) ನಾಯಕಿ ಇಲ್ತಿಜಾ ಮುಫ್ತಿ ಶುಕ್ರವಾರ ಶ್ರೀನಗರದ ಕೋಠಿಬಾಗ್ ಪೊಲೀಸ್ ಠಾಣೆಗೆ ತೆರಳಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಇಲ್ತಿಜಾ ಮುಫ್ತಿ, "ಈ ಕೃತ್ಯವು ತೀವ್ರ ಅವಮಾನಕರವಾಗಿದ್ದು, ಮಹಿಳೆಯರು ಮತ್ತು ಧಾರ್ಮಿಕ ಅಲ್ಪಸಂಖ್ಯಾತರ ಬಗ್ಗೆ ಸ್ತ್ರೀದ್ವೇಷ ಮತ್ತು ಸೂಕ್ಷ್ಮವಲ್ಲದ ಮನೋಭಾವವನ್ನು ಪ್ರತಿಬಿಂಬಿಸುತ್ತದೆ. ಈ ಘಟನೆ ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ. ಸಾಂವಿಧಾನಿಕ ಹುದ್ದೆಯನ್ನು ಹೊಂದಿರುವ ಯಾರಾದರೂ ಈ ರೀತಿ ವರ್ತಿಸಿದಾಗ, ಅದನ್ನು ನಿರ್ಲಕ್ಷಿಸಿ ಸಾಮಾನ್ಯೀಕರಿಸಲು ಸಾಧ್ಯವಿಲ್ಲ" ಎಂದು ಅವರು ಹೇಳಿದರು.

"ಬುರ್ಖಾ ಮತ್ತು ನಿಖಾಬ್ ಸುತ್ತಲಿನ ವಿವಾದ ಹೊಸದಲ್ಲ. ಅಂತಹ ಘಟನೆಗಳು ಪುನರಾವರ್ತನೆಯಾಗುತ್ತಲೇ ಇರುತ್ತವೆ. ಇವು ಪ್ರತ್ಯೇಕ ಕೃತ್ಯಗಳಲ್ಲ. ಮುಸ್ಲಿಂ ಮಹಿಳೆಯರ ಘನತೆಯನ್ನು ಪದೇ ಪದೇ ಪ್ರಶ್ನಿಸುವ ಅಥವಾ ಉಲ್ಲಂಘಿಸುವ ಆಳವಾದ ಸಮಸ್ಯೆಯನ್ನು ಅವು ತೋರಿಸುತ್ತವೆ. ನಾವು ಅದನ್ನು ದೃಢವಾಗಿ ಪ್ರಶ್ನಿಸಬೇಕಾಗಿದೆ" ಎಂದು ಇಲ್ತಿಜಾ ಹೇಳಿದರು.



ಕಾಲಮಿತಿಯಲ್ಲಿ ಸರಕಾರಿ ನೌಕರರ ವಿಮೆಗಳಿಗೆ ಬೋನಸ್ ಪಾವತಿಸಿದ ಧಾರವಾಡ ಜಿಲ್ಲಾ ವಿಮಾ ಅಧಿಕಾರಿ ಜೆ.ಸಿ. ಕಠಾರಿ ಅವರನ್ನು ವಿವಿಧ ಇಲಾಖೆಗಳ ಸರಕಾರಿ ನೌಕರರು ಶಾಲು ಹೊದೆಸಿ, ಸನ್ಮಾನಿಸಿ ಗೌರವಿಸಿದರು. ಜೆ.ಸಿ.ಕಠಾರಿ ಮತ್ತು ಸಿಬ್ಬಂದಿಗಳು ರಜೆ ದಿನಗಳನ್ನು ಲೆಕ್ಕಿಸದೆ, ತಡ ರಾತ್ರಿವರೆಗೂ ಕರ್ತವ್ಯ ನಿರ್ವಹಿಸಿ, ಕೇವಲ 15 ದಿನಗಳಲ್ಲಿ ಸುಮಾರು 2,150 ಸರಕಾರಿ ನೌಕರರಿಗೆ ಲಾಭಾಂಶ ಜಮೆ ಮಾಡಿದ್ದಾರೆ. ಇವರ ಪಾರ್ದರ್ಶಕ ಮತ್ತು ನೌಕರ ಸ್ನೇಹಿ ಕರ್ತವ್ಯ ಗುರುತಿಸಿ, ಮೆಚ್ಚಿದ ವಿವಿಧ ಇಲಾಖೆಗಳ ಸರಕಾರಿ ನೌಕರರು, ಸ್ವತಃ ಕಠಾರಿ ಅವರ ಕಾರ್ಯಾಲಯಕ್ಕೆ ತೆರಳಿ ಕೃತಜ್ಞತೆಗಳನ್ನು ಸಲ್ಲಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka